04 ಅಕ್ಟೋಬರ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 204 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಮೀರಾಬಾಯಿ ಚಾನು ಅವರು ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಷಿಪ್‌ನ ಮಹಿಳೆಯರ 48 ಕೆ.ಜಿ. ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದುಕೊಂಡಿದ್ದಾರೆ.



ಭಾರತದ ಕೃಷಿ ಉತ್ಪನ್ನ, ಔಷಧಿ ಖರೀದಿಗೆ ರಷ್ಯಾ ಅಸ್ತು » 2



ಬಿಜೆಪಿ ಅವಧಿಯಲ್ಲಿ ಹೈನುಗಾರಿಕೆ ಕ್ಷೇತ್ರ ಶೇ.70ರಷ್ಟು ವೃದ್ಧಿ



ಕೇಂದ್ರದಿಂದ ಮತ್ತೆ ರಾಜ್ಯಕ್ಕೆ ತೆರಿಗೆ ಅನ್ಯಾಯ » 4

# ಎಲ್ಲಾ ಚುನಾವಣೆಯಲ್ಲೂ ಮೈತ್ರಿ ಮುಂದುವರಿಕೆ

## ಹೊಂದಾಣಿಕೆಗೆ ಧಕ್ಕೆ ಇಲ್ಲ, ಯಾರು ಚಿಂತಿಸಬೇಕಿಲ್ಲ: ಹೆಚ್.ಡಿ.ದೇವೇಗೌಡ ಸ್ಪಷ್ಟನೆ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿಯು ಮುಂಬರುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಮತ್ತು ವಿಧಾನಸಭೆ ಚುನಾವಣೆಗಳಿಗೂ ಮುಂದುವರಿಯುತ್ತದೆ ಎಂದು ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಖಚಿತ ಪಡಿಸಿದ್ದಾರೆ.

ಬೆಂಗಳೂರಿನ ಜೆಡಿಎಸ್ ರಾಜ್ಯ ಕಚೇರಿ ಜೆ.ಪಿ. ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆಗೆ ಜೆಡಿಎಸ್-ಬಿಜೆಪಿ ಮೈತ್ರಿ ಮಾಡಿಕೊಂಡವು. ಈ ಮೈತ್ರಿ ಮುಂದಿನ ಎಲ್ಲಾ ಚುನಾವಣೆಗಳಿಗೂ ಅಬಾಧಿತವಾಗಿ ಮುಂದುವರಿಯುತ್ತದೆ. ಯಾವುದೇ ಚುನಾವಣೆಯಾದರೂ ಮೈತ್ರಿಗೆ ಧಕ್ಕೆ ಇಲ್ಲ. ಈ ಬಗ್ಗೆ ಯಾರೂ ಚಿಂತಿಸುವ ಅಗತ್ಯವಿಲ್ಲ. ಸ್ಥಳೀಯ ಸಂಸ್ಥೆ ಚುನಾವಣೆಗಳಿಗೂ ಮುಂದುವರಿಯುತ್ತದೆಂದು ಒತ್ತಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ನನ್ನ ಸಂಬಂಧ ಎಂದಿಗೂ ಬದಲಾಗುವುದಿಲ್ಲ. ನಮ್ಮ ಬಾಂಧವ್ಯ ಉತ್ತಮವಾಗಿದೆ. ಕಳೆದ ಹತ್ತು ವರ್ಷಗಳಲ್ಲಿ ನಾನು ಅವರ ಬಗ್ಗೆ ಲಘುವಾಗಿ ಮಾತನಾಡಿದ ಒಂದು ಸಂದರ್ಭವನ್ನು ತೋರಿಸಿ ಎಂದು ಹೇಳಿದರು.



**ನೆರೆ ಪರಿಹಾರ ವಿತರಣೆಗೆ ಗಡುವು**

ಕಲ್ಯಾಣ ಕರ್ನಾಟಕದ ನೆರೆಪೀಡಿತ ಜಿಲ್ಲೆಗಳಿಗೆ ಈವರೆಗೆ ಏನೆಲ್ಲಾ ಪರಿಹಾರ ಒದಗಿಸಲಾಗಿದೆ ಎಂಬ ಬಗ್ಗೆ 48 ಗಂಟೆಗಳಲ್ಲಿ ಜನತೆಗೆ ಸಮಗ್ರ ಮಾಹಿತಿ ನೀಡಬೇಕು. ನೆರೆ ಪರಿಹಾರ ಕಾರ್ಯಕ್ರಮಗಳನ್ನು ಸಮರೋಪಾದಿಯಲ್ಲಿ ಕೈಗೊಳ್ಳಬೇಕು. ಪ್ರವಾಹದಿಂದ ಜನರು ಅತೀವ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಂದಿನ 3-4 ದಿನಗಳಲ್ಲಿ ನಾನೂ ನೆರೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಈ ಸರ್ಕಾರ ಏನೆಲ್ಲಾ ಪರಿಹಾರವನ್ನು ಒದಗಿಸಿದೆ ಎಂಬುದನ್ನು ಖುದ್ದು ನೋಡುತ್ತೇನೆ ಎಂದರು.

ಸಾಧ್ಯವಿರುವ ಕಡೆಗಳಿಗೆ ನಾನು ರಸ್ತೆಯ ಮೂಲಕವೇ ತೆರಳಿ ನೆರೆ ಸಂತ್ರಸ್ತರನ್ನು ಭೇಟಿ ಮಾಡುತ್ತೇನೆ. ಅವರು ಎದುರಿಸುತ್ತಿರುವ ಸಮಸ್ಯೆಗಳನ್ನು ಕಣ್ಣಾರೆ ಕಂಡು ಅವರಿಂದ ಮಾಹಿತಿ ಪಡೆಯುತ್ತೇನೆ. ಆಗಿರುವ ನಷ್ಟದ ಬಗ್ಗೆ ವಿವರ ಪಡೆದು ಅದಕ್ಕೆ ತಕ್ಕಂತೆ ರಾಜ್ಯ ಸರ್ಕಾರ ನೆರವಿಗೆ ಬಂದಿದೆಯೇ ಇಲ್ಲವೇ ಎಂಬುದನ್ನು ತಿಳಿದುಕೊಳ್ಳುತ್ತೇನೆ. ಬಳಿಕ ಸಮಗ್ರ ವರದಿ ಸಿದ್ಧಪಡಿಸಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲಿಸುತ್ತೇನೆ ಎಂದು ಹೇಳಿದರು.

ನೆರೆ ವಿಷಯದಲ್ಲಿ ಯಾರೂ ರಾಜಕೀಯ ಮಾಡಬಾರದು. ಸರ್ಕಾರ ಅದನ್ನು ತುರ್ತು ಆದ್ಯತೆ ಎಂದು ಪರಿಗಣಿಸಬೇಕು. ಆದರೆ, ಖಜಾನೆಯಲ್ಲಿ ಹಣವಿಲ್ಲ ಎಂದು ಶಾಸಕರೇ ಹೇಳುತ್ತಿರುವುದನ್ನು ಗಮನಿಸಿದ್ದೇನೆ. ನೆರೆಯಿಂದಾಗಿ 50ಕ್ಕೂ ಹೆಚ್ಚು ಜನರು ಜೀವ ಕಳೆದುಕೊಂಡಿದ್ದಾರೆ. ಅಪಾರ ಸಂಖ್ಯೆಯಷ್ಟು ಜಾನುವಾರುಗಳು ಸಾವನ್ನಪ್ಪಿವೆ. ದೊಡ್ಡ ಪ್ರಮಾಣದಲ್ಲಿ ಆಸ್ತಿ, ಬೆಳೆ ನಷ್ಟವಾಗಿದೆ. ಮೂಲಸೌಕರ್ಯಗಳಲ್ಲಿ ರಸ್ತೆಗಳು, ಸೇತುವೆಗಳು ಕುಸಿದಿವೆ. ಮನೆಗಳಿಗೆ ನೆರೆ ನೀರು ನುಗ್ಗಿ ಜನರು ನಿರ್ಗತಿಕರಾಗಿದ್ದಾರೆಂದು ಕಳವಳ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳಿಗೆ ಹಣ ನೀಡುತ್ತಿರುವುದರಿಂದ ನೆರೆ ಪೀಡಿತ ಜಿಲ್ಲೆಗಳಿಗೆ ಮತ್ತು ಇನ್ನಿತರ ಬಾಬ್ತುಗಳಿಗೆ ಹಣವಿಲ್ಲ ಎಂದು ಅವರೇ ಹೇಳುತ್ತಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ. ಕಲ್ಯಾಣ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಉಂಟಾ ಗಿರುವ ತೀವ್ರ ಪ್ರವಾಹ ಪರಿಸ್ಥಿತಿಯನ್ನು ನಿಭಾ ಯಿಸಲು ಸರ್ಕಾರದ ಬಳಿ ಹಣವಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು. » ನಾಲ್ಕನೇ ಪುಟದಲ್ಲಿ

**ಗ್ಯಾರಂಟಿಗಳಿಂದ ಹದಗೆಟ್ಟ ಆರ್ಥಿಕ ಸ್ಥಿತಿ**

ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ. ಕಲಬುರಗಿ ಸೇರಿ ಉತ್ತರ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಉಂಟಾಗಿ ರುವ ತೀವ್ರ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸರ್ಕಾರದ ಬಳಿ ಹಣವಿಲ್ಲ ಎಂದು ದೇವೇಗೌಡರು ದೂರಿದರು. ಖಾತರಿ ಯೋಜನೆಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ. ಇದನ್ನು ಹೇಳುತ್ತಿರುವುದು ನಾನಲ್ಲ, ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದಾರೆ. ಆಡಳಿತ ಪಕ್ಷದ ಶಾಸಕರಲ್ಲಿ ಗೊಂದಲವಿದೆ. ಕಾಂಗ್ರೆಸ್ ಶಾಸಕರು ಇಂತಹ ಭೀಕರ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸಹ ಸರ್ಕಾರದ ಬಳಿ ಹಣವಿಲ್ಲವೆಂದು ಹೇಳುತ್ತಿದ್ದಾರೆ ಎಂದರು.

## ಸಿದ್ದರಾಮಯ್ಯ ಕೊಡಲ್ಲ-ಡಿಕೆಶಿ ಬಿಡಲ್ಲ: ಆರ್.ಅಶೋಕ್

• ಪ್ರಜೋದಯ ವರದಿ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರ ಬಿಟ್ಟು ಕೊಡುವು ದಿಲ್ಲ, ಉಪಮುಖ್ಯಮಂತ್ರಿ ಡಿ.ಕೆ. ಶಿವ ಕುಮಾರ್ ಬಿಡುವುದಿಲ್ಲ. ಇವರಿಬ್ಬರ ನಡುವೆ ರಾಜ್ಯದ ಜನರು ಬಡವಾಗಿದ್ದಾರೆಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಆಕ್ರೋಶ ವ್ಯಕ್ತಪಡಿಸಿದರು.

ಬೆಳಗಾವಿಯಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ನವೆಂಬರ್‌ನಲ್ಲಿ ಮುಖ್ಯಮಂತ್ರಿ ಬದಲಾವಣೆಯಾಗಲಿದೆ ಎಂದು ಹೇಳಿದ್ದೆ. ಸೆಪ್ಟೆಂಬರ್‌ಗೆ ಕ್ರಾಂತಿಯಾಗಲಿದೆ ಎಂದಿದ್ದ ರಾಜಣ್ಣ ಮನೆಗೆ ಹೋಗಿದ್ದಾರೆ. ಮುಖ್ಯಮಂತ್ರಿ ಬದಲಾವಣೆ ಒಪ್ಪಂದ ಆಗಿರುವುದು ನೂರಕ್ಕೆ ನೂರು ನಿಜವೆಂದರು.

ಈ ಸಂದರ್ಭದಲ್ಲಿ ಬಿಜೆಪಿಯಿಂದ ಸರ್ಕಾರ ರಚನೆ ಮಾಡುವುದಿಲ್ಲ. ಚುನಾವಣೆ ನಡೆಯುವುದೇ ಸೂಕ್ತ ಎನ್ನುವುದು ನಮ್ಮೆಲ್ಲರ ಅಭಿಪ್ರಾಯ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ನಡೆಯುತ್ತಿಲ್ಲ. ರಸ್ತೆಗಳು ಗುಂಡಿ ಬಿದ್ದಿವೆ. ಬೆಂಗಳೂರಿನಲ್ಲಿ ಹಳ್ಳ ಇಲ್ಲದ ರಸ್ತೆಯೇ ಇಲ್ಲ. ಇಂತಹ ಪರಿಸ್ಥಿತಿ ಈಗ ಇದೆಯೆಂದರು.

ಸರ್ಕಾರ ಈಗ ಜಾತಿ ಸಮೀಕ್ಷೆಯಲ್ಲಿ



ನಿರತವಾಗಿದೆ. ಅಧಿಕಾರಿಗಳು ಅದರಲ್ಲೇ ಇದ್ದಾರೆ. ಹಾಗಾಗಿ ಯಾರೂ ಪ್ರವಾಹ ಹಾನಿ ಪ್ರದೇಶಗಳಿಗೆ ಭೇಟಿ ನೀಡುತ್ತಿಲ್ಲ. ಬೆಳೆ ಹಾನಿಯಾದ ಕೂಡಲೇ ನವದೆಹಲಿಗೆ ಹೋಗಿ ಕೇಂದ್ರ ಸಚಿವರನ್ನು ಭೇಟಿ ಮಾಡುತ್ತಿದ್ದೇವು. ಈಗ ಕಾಂಗ್ರೆಸ್‌ನ ಯಾವುದೇ ಸಚಿವರು ದೆಹಲಿಗೆ ಹೋಗಿ ಭೇಟಿ ಮಾಡುತ್ತಿಲ್ಲ. ಮುಖ್ಯಮಂತ್ರಿ ಬದಲಾವಣೆ ಯಾವಾಗ ಎಂದು ಚರ್ಚೆಯಾಗುತ್ತಿದೆ. ಶಾಸಕರು ನಾನೇ ಮಂತ್ರಿ ಎಂದು ಹೇಳಿಕೊಳ್ಳುತ್ತಿದ್ದಾರೆಂದರು.

ಬಿಜೆಪಿ ವತಿಯಿಂದ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಲಾಗಿದೆ. ಮನೆ ಹಾನಿ, ರಸ್ತೆ ಹಾನಿ, ಬೆಳೆ ಹಾನಿ ಮೊದಲಾದವನ್ನು ಪರಿಶೀಲಿಸಲಾ ಗಿದೆ. ಜನರು ಬೀದಿಗೆ ಬಂದು ನಿಲ್ಲುವ ಸ್ಥಿತಿ ಬಂದಿದೆ. ಈ ಸರ್ಕಾರಕ್ಕೆ ಜನರ ಸಂಕಷ್ಟ ಅರಿವಿಗೆ ಬರುತ್ತಿಲ್ಲ. ಮಳೆ ಹಾನಿಯಾದಾಗ ಅದರ ವರದಿ ಪಡೆಯಬೇಕು. ಎಲ್ಲಿ ಎಷ್ಟು ಹಾನಿಯಾಗಿದೆ ಎಂದು ತಿಳಿದು, ಮುಖ್ಯಮಂತ್ರಿ ಸಚಿವರ ಜೊತೆ ಚರ್ಚಿಸಿ ತಂಡಗಳನ್ನು ಪ್ರತಿ ಜಿಲ್ಲೆಗಳಿಗೆ ಕಳುಹಿಸಬೇಕೆಂದು ಆಗ್ರಹಿಸಿದರು.

ಕೇಂದ್ರ ಸರ್ಕಾರದ ಅಧಿಕಾರಿಗಳ ತಂಡಕ್ಕೆ, ರಾಜ್ಯಕ್ಕೆ ಭೇಟಿ ಮಾಡಲು ಹೇಳಬೇಕು. ಸಚಿವರಿಗೆ ಕೆಲಸ ಕೊಡದೆ ಸಿದ್ದರಾಮಯ್ಯ ಬೇಜವಾಬ್ದಾರಿ ತೋರಿದ್ದಾರೆ. ನಾನೇ ಮುಖ್ಯ ಮಂತ್ರಿ ಎಂದು ಸಿದ್ದರಾಮಯ್ಯ ಹೇಳುತ್ತಿದ್ದಾರೆಯೇ ಹೊರತು, ಯಾವ ಕ್ರಮ ಕೈಗೊಂಡಿದ್ದೇನೆ ಎನ್ನುತ್ತಿಲ್ಲವೆಂದರು.

## ಹಿರೀಸಾವೆಯಲ್ಲಿ ವಿಜೃಂಭಣೆಯ ದಸರಾ ಆಚರಣೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ವಿಜಯದಶಮಿ ಅಂಗವಾಗಿ ತಾಲ್ಲೂಕಿನ ಹಿರೀಸಾವೆ ಗ್ರಾಮದೇವತೆ ಶ್ರೀ ಚೌಡೇಶ್ವರಿ ದೇವಿಯವರ ದಸರಾ ಉತ್ಸವವು ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆ ಯಿಂದ ನೆರವೇರಿತು.

ಕೆರೆ ಏರಿಯಲ್ಲಿರುವ ದೇವಿಯ ಮೂಲ ವಿಗ್ರಹಕ್ಕೆ ಹಿರೀಸಾವೆ ಗ್ರಾಮಸ್ಥರು ಮತ್ತು ಕುರುಹಿನ ಶೆಟ್ಟಿ ಸೇವಾ ಸಮಿತಿ ವತಿಯಿಂದ ಅಭಿಷೇಕ ಮತ್ತು ವಿಶೇಷ ಪೂಜೆ ಮಾಡಲಾಯಿತು. ರಾತ್ರಿ 8 ಗಂಟೆಗೆ ಉತ್ಸವ ಮೂರ್ತಿಗೆ ವಿವಿಧ ಪುಷ್ಪಗಳು ಮತ್ತು ಆಭರಣಗಳಿಂದ ಶೃಂಗರಿಸಿ, ವಿದ್ಯುತ್ ದೀಪಗಳಿಂದ ಅಲಂಕೃತವಾದ ವಾಹನದಲ್ಲಿ ದೇವಿಯವರನ್ನು ಭಕ್ತರ ಜಯಘೋಷಣೆಯೊಂದಿಗೆ ಕೂರಿಸಲಾಯಿತು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆಸಾಗಿ. ಶುಕ್ರವಾರ ಬೆಳಗಿನ ಜಾವ 2.30ಕ್ಕೆ ದಸರಾ ಮಹೋತ್ಸವ ಮುಕ್ತಾಯವಾಯಿತು. ಶಾಸಕ ಸಿ.ಎನ್.ಬಾಲಕೃಷ್ಣ, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ, ಮಾಜಿ ಎಂಎಲ್‌ಸಿ ಎಂ.ಎ. ಗೋಪಾಲ ಸ್ವಾಮಿ, ಆಣತಿ ಆನಂದ್ ಸೇರಿ ಜನಪ್ರತಿನಿಧಿಗಳು ದಸರಾ ಉತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಿರೀಸಾವೆಯ ಮಂಜುನಾಥ ತಂಡದ ಮಂಗಳವಾದ್ಯ, ನಿಂಗಪ್ಪನ ವರ ರಾಜಪುರದ ಮಹಿಳೆಯರ ಕೋಲಾಟ, ಅಜಂಪುರದವರ ವೀರಗಾಸೆ ಕುಣಿತ, ಬೆಳ್ತಂಗಡಿಯ ಸೃಷ್ಟಿ ಆರ್ಟ್ಸ್‌ನವರ ಕೀಲು ಕುದುರೆಗೊಂಬೆ ಮೇಳ, ಸಾಗರದ



ಬಸಪ್ಪ ತಂಡದ ಡೊಳ್ಳು ಕುಣಿತ, ಆಲ್ಲೂರಿನ ನಟರಾಜ್ ತಂಡದ ಸೋಮನ ಕುಣಿತ ಸೇರಿದಂತೆ ಹಲವು ಕಲಾತಂಡಗಳು ದಸರಾಕ್ಕೆ ರಂಗು ತುಂಬಿದವು. ಚೌಡೇಶ್ವರಿ ಸಮುದಾಯ ಭವನದಲ್ಲಿ ಅನ್ನದಾನ ಏರ್ಪಡಿಸಲಾಗಿತ್ತು.

ಹಿರೀಸಾವೆಯ ಲಕ್ಷ್ಮೀದೇವಿ, ಬಸವೇಶ್ವರ, ಸಿದ್ದೇಶ್ವರ, ಉಡಿಸಲಮ್ಮ, ಸಿದ್ದಲಿಂಗೇಶ್ವರ ಸ್ವಾಮಿ, ಕಾಳಿಕಾಂಬ, ಮುದ್ರೆಕಲ್ ಆಂಜನೇಯ ಸ್ವಾಮಿ, ಚನ್ನಕೇಶವ ಸ್ವಾಮಿ ದೇವರುಗಳು ಮೆರವಣಿಗೆಯಲ್ಲಿ ಸಾಗಿದವು. ಬೆಳಗಿನ ಜಾವದವರೆಗೂ ಉತ್ಸವದಲ್ಲಿ ಸಾವಿರಾರು ಮಂದಿ ಪಾಲ್ಗೊಂಡರು.

ಪಟ್ಟಣದಲ್ಲಿ ಪ್ರತಿಷ್ಠಾಪಿಸಿದ್ದ ಗೌರಿ, ಗಣೇಶ ಮೂರ್ತಿಗಳ ವಿಸರ್ಜನಾ ಮಹೋತ್ಸವವು ಸಹ ನಡೆಯಿತು. ಕಳೆದ ಹತ್ತು ದಿನಗಳಿಂದ ವಿವಿಧ ದೇವರಗಳ ಒಕ್ಕಲಿನವರು ಮತ್ತು ಸಮುದಾಯದವರು ನವರಾತ್ರಿ ಆಚರಣೆ ಮಾಡಿದ್ದರು.

# ಶಕ್ತಿ ದೇವತೆ ಹಾಸನಾಂಬ ಜಾತ್ರೆಗೆ ಭರದ ಸಿದ್ಧತೆ

## ಹಾಸನಾಂಬ ದೇಗುಲದಲ್ಲಿ ಎಸಿ ವ್ಯವಸ್ಥೆ | ನೂಕುನುಗ್ಗಲು ತಪ್ಪಿಸಲು ಹೆಚ್ಚುವರಿ ಬ್ಯಾರಿಕೇಡ್

• ಪ್ರಜೋದಯ ವರದಿ

**ಹಾಸನ:** ವರ್ಷಕ್ಕೊಮ್ಮೆ ದರ್ಶನ ಭಾಗ್ಯ ಕರುಣಿಸುವ ಶಕ್ತಿ ದೇವತೆ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ದಿನಗಣನೆ ಶುರುವಾಗಿದ್ದು ಜಿಲ್ಲಾಡಳಿತ ಭರದ ಸಿದ್ಧತೆ ನಡೆಸುತ್ತಿದೆ.

ಈ ಬಾರಿಯೂ ದೇವಿ ದರ್ಶನದ ಜೊತೆಗೆ ಟೂರ್ ಪ್ಯಾಕೇಜ್, ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅ.9 ರಂದು ಹಾಸನಾಂಬ ದೇಗುಲದ ಗರ್ಭಗುಡಿ ಬಾಗಿಲು ಶಾಸ್ತ್ರೋಕ್ತವಾಗಿ ತೆರೆಯಲಿದ್ದು, ಅ.23 ರಂದು ಬಾಗಿಲು ಮುಚ್ಚಲಿದೆ. ಅ. 9 ಮತ್ತು 23ರಂದು ಸಾರ್ವಜನಿಕ ದರ್ಶನಕ್ಕೆ ಅವಕಾಶ ಇರುವುದಿಲ್ಲ. ಉಳಿದ ಎಲ್ಲಾ ದಿನ ನೈವೇದ್ಯ ಸಮಯ ಹೊರತುಪಡಿಸಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಮಾಡಿ



ಕೊಡಲಾಗಿದೆ.

**ಅಧಿಕಾರಿಗಳ ಸರಣಿ ಸಭೆ**

ರಾಜ್ಯ ಮಾತ್ರವಲ್ಲದೆ ಹೊರ ರಾಜ್ಯಗಳಿಂದಲೂ ಭಕ್ತರು ಆಗಮಿಸುವುದರಿಂದ ಯಾವುದೇ ಗೊಂದಲ ಆಗದಂತೆ ಅಚ್ಚುಕಟ್ಟು ಕಾರ್ಯಕ್ರಮಕ್ಕೆ ಜನಪ್ರತಿನಿಧಿಗಳು ಹಾಗು ಅಧಿಕಾರಿಗಳು ಗಮನ ಹರಿಸಿದ್ದಾರೆ. ಕಳೆದ ವರ್ಷ ಬೇಕಾಬಿಟ್ಟಿ ಪಾಸ್ ವಿತರಿಸಿದ್ದರಿಂದ ಭಾರೀ ಗೊಂದಲವಾಗಿತ್ತು. ಅಂತಹ ಪ್ರಮಾದ ಮರುಕಳಿಸದಂತೆ ಎಚ್ಚರ ವಹಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಮೂರು ಸಭೆ ನಡೆಸಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಬೆಂಗಳೂರಿನಲ್ಲಿ ಸಭೆ ನಡೆಸಿ ಎಲ್ಲರ ವಿಶ್ವಾಸ ಪಡೆದಿದ್ದಾರೆ. ಮತ್ತೊಂದೆಡೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಹಲವು ಬಾರಿ ಸ್ಥಳ ಪರಿಶೀಲಿಸಿ ಸಿದ್ಧತೆ ಪರಿಶೀಲನೆ ನಡೆಸುತ್ತಿದ್ದಾರೆ.

ಈಗಾಗಲೇ ದೇವಸ್ಥಾನಕ್ಕೆ ಬಣ್ಣ ಬಳಿಯುವ ಕಾರ್ಯ ಪೂರ್ಣಗೊಂಡು, ಆಹ್ವಾನ ಪತ್ರಿಕೆಗಳ ಹಂಚಿಕೆ ಕಾರ್ಯವೂ ನಡೆಯುತ್ತಿದೆ. ಹಾಸನ ನಗರದ ಹಲವೆಡೆ ಸ್ವಾಗತ ಕಮಾನು, ಇಡೀ ನಗರದಾದ್ಯಂತ ಲೈಟಿಂಗ್, ಎಲ್‌ಇಡಿ ಅಳವಡಿಕೆ, ರಸ್ತೆ ಗುಂಡಿ ಮುಚ್ಚುವ ಕಾರ್ಯ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ಬ್ಯಾರಿಕೇಡ್, ಮ್ಯಾಟ್ ಸೇರಿ ಬರುವ ಭಕ್ತರಿಗೆ ಎಲ್ಲಾ ರೀತಿಯ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ.

**ಭಕ್ತರ ಸಂಖ್ಯೆ ಹೆಚ್ಚುವ ನಿರೀಕ್ಷೆ**

ಕಳೆದ ವರ್ಷ 20 ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆದಿದ್ದರು. ಈ ಬಾರಿ ಸಂಖ್ಯೆಯಲ್ಲಿ ಹೆಚ್ಚುವ ಸಾಧ್ಯತೆಯಿದ್ದು ದೇವಿ ದರ್ಶನದ ಸಮಯವೂ ಹೆಚ್ಚಿದೆ. ನೂಕುನುಗ್ಗಲು ಆಗದಂತೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ ಅಗತ್ಯ ಕ್ರಮಕ್ಕೆ ಮುಂದಾಗಿದೆ. ವಿಶೇಷ ದರ್ಶನಕ್ಕೆ ಬರುವಂತಹ ಭಕ್ತರಿಗೆ 300 ರೂ. ಹಾಗು 1000 ರೂ. ಪಾಸ್ ವ್ಯವಸ್ಥೆ ಮಾಡಲಾಗಿದೆ. ಇದೇ ಮೊದಲ ಬಾರಿಗೆ » ನಾಲ್ಕನೇ ಪುಟದಲ್ಲಿ

## ನಾಳೆ ರೇಷ್ಮೆ ನೂಲು ಬಿಚ್ಚುವ ಘಟಕ ಉದ್ಘಾಟನೆ

• ಪ್ರಜೋದಯ ವರದಿ



**ಬಾಣಾವರ:** ಬೆಂಡೆಕೆರೆ ಗ್ರಾಮದಲ್ಲಿ ಮೆರಾಜ್ ಟ್ರೇಡರ್ಸ್ ಸ್ವಯಂ ಚಾಲಿತ ರೇಷ್ಮೆ ನೂಲು ಬಿಚ್ಚುವ ಘಟಕದ ಉದ್ಘಾಟನಾ ಅ.5ರಂದು ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಸಂಸದ ಶ್ರೇಯಸ್ ಪಟೇಲ್, ಗೃಹ ಮಂಡಳಿ ಅಧ್ಯಕ್ಷ ಕೆ. ಎಂ.ಶಿವಲಿಂಗೇಗೌಡ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿಳಿ ಚೌಡಯ್ಯ, ಅರಸೀಕೆರೆ ನಗರಸಭೆ ಅಧ್ಯಕ್ಷ ಸಮೀವುಲ್ಲಾ, ಮೂಡ ಮಾಜಿ ಅಧ್ಯಕ್ಷ ವಿಜಯ್ ಕುಮಾರ್, ರೇಷ್ಮೆ ಬೆಳೆಗಾರರು ಹಾಗು ರೈತರು ಭಾಗವಹಿಸಲಿದ್ದಾರೆಂದು ಸಂಸ್ಥೆಯ ಮುನಾವರ್ ಪಾಷಾ ಅವರು ತಿಳಿಸಿದ್ದಾರೆ.

# ಕುಡಿದ ಅಮಲಿನಲ್ಲಿ ತಾಯಿ ಹತ್ಯೆಗೈದ ಪುತ್ರ

• ಪ್ರಜೋದಯ ವರದಿ

**ಆಲೂರು:** ಮನೆಗೆ ಬಂಧು ಮಿತ್ರರು ಬಂದಾಗ ತಾಯಿ ಜೋರಾಗಿ ಮಾತನಾಡುತ್ತಿದ್ದಾಳೆಂದು ಆಕ್ರೋಶದಿಂದ ಕುಡಿದ ಅಮಲಿನಲ್ಲಿ ಪುತ್ರ ಮರದ ದೊಣ್ಣೆಯಿಂದ ಹೊಡೆದು ಸಾಯಿಸಿರುವ ಘಟನೆ ತಾಲ್ಲೂಕಿನ ಚನ್ನಾಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಾಗಯ್ಯ ಅವರ ಕಿರಿಯ ಹೆಂಡತಿ ಪ್ರೇಮಮ್ಮ (40) ಮೃತರು. ಪುತ್ರ ಸಂತೋಷ್ (20) ಹತ್ಯೆಗೈದ ಆರೋಪಿ.ಆಯುಧ ಪೂಜೆ ಹಿನ್ನಲೆಯಲ್ಲಿ ಗುರುವಾರ ರಾತ್ರಿ 10.30ರ ಸಮಯದಲ್ಲಿ ಮಾಂಸ ದೂಟಕ್ಕೆ ತಯಾರಿ ಮಾಡಿಕೊಳ್ಳುತ್ತಿದ್ದರು. ಪ್ರೇಮಮ್ಮ ಅವರಿಗೂ ಕುಡಿತದ ಚಟವಿದ್ದು ಕೆಲಸ ಮಾಡುತ್ತಲೇ ಜೋರಾಗಿ ಮಾತನಾಡುತ್ತಿದ್ದರು. ಮನೆಗೆ ನೆಂಟರು ಬಂದಾಗಲಾದರೂ ಸುಮ್ಮನಿರು ಎಂದು ಮಗ ಎಷ್ಟೇ ಹೇಳಿದರೂ ಪ್ರೇಮಮ್ಮ ಕೇಳಲಿಲ್ಲ ಎನ್ನಲಾಗಿದೆ.

ತಾಯಿ ಮಗ ಆಗಾಗ ಗಲಾಟೆ ಮಾಡುತ್ತಿದ್ದರು. ಆಕೆಯ ಮಾತು ಕೇಳಲಾಗದೆ ಆಕ್ರೋಶ ಗೊಂಡ ಆತ ಕಬ್ಬಿಣದ ಹಾರೆಯಿಂದ ಹೊಡೆಯಲು ಯತ್ನಿಸಿದ್ದ. ಸ್ಥಳದಲ್ಲಿದ್ದ ತಂದೆ ನಾಗಯ್ಯ ಹಾರೆ ಕಿತ್ತುಕೊಂಡು ಅದನ್ನು ಇಡಲು




ಹೋಗುತ್ತಿದ್ದಂತೆ ಪಕ್ಕದಲ್ಲೇ ಇದ್ದ ಮರದ ದೊಣ್ಣೆಯಿಂದ ತಲೆಗೆ ಬಲವಾಗಿ ಹೊಡೆದಿದ್ದಾನೆ. ತೀವ್ರ ಅಸ್ವಸ್ಥರಾದ ಪ್ರೇಮಮ್ಮ ಅವರನ್ನು ಹಿಮ್ಸ್‌ಗೆ ದಾಖಲಿ ಸಲಾಯಿತು. ರಕ್ತಸ್ರಾವ ಹಾಗು ಬಲವಾದ ಏಟು ಬಿದ್ದಿದ್ದರಿಂದ ಚಿಕಿತ್ಸೆ ಫಲಿಸದೆ ಶುಕ್ರವಾರ ಬೆಳಿಗ್ಗೆ ನಿಧನರಾಗಿದ್ದಾರೆ.

**ಆಸ್ಪತ್ರೆಗೆ ಬರುತ್ತಿದ್ದ ಸಂತೋಷ್**

ಮದ್ಯದ ಅಮಲಿನಲ್ಲಿದ್ದ ಸಂತೋಷ್‌ಗೆ ರಾತ್ರಿ ಏನು ನಡೆದಿದೆ ಎಂಬುದರ ಪರಿವೇ ಇಲ್ಲ ದಾಗಿತ್ತು. ರಾತ್ರಿ ಮನೆಯಲ್ಲೇ ಮಲಗಿದ್ದ ಆತ ಬೆಳಿಗ್ಗೆ ಎದ್ದು ಅಮ್ಮ, ಅಪ್ಪ ಎಲ್ಲಿ ಎಂದು ಕೇಳಿ ದ್ದಾನೆ. ಆಗ ತಾನು ಮಾಡಿದ ತಪ್ಪಿನ ಅರಿವಾಗಿ ಬೈಕ್ ಏರಿ ಹಾಸನ ಆಸ್ಪತ್ರೆಗೆ ಬಂದಿದ್ದಾನೆ. ಆತನ ಬರುವಿಕೆಯ ಸುದ್ದಿ ತಿಳಿದ ಪೊಲೀಸರು ಆಸ್ಪತ್ರೆಯಲ್ಲೇ ವಶಕ್ಕೆ ಪಡೆದಿದ್ದಾರೆ. ಆಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ನಿಧನ

• ಪ್ರಜೋದಯ ವರದಿ



**ಬೆಂಗಳೂರು:** ಖ್ಯಾತ ಪತ್ರಕರ್ತ, ಲೇಖಕ ಮತ್ತು ಅಂಕಣಕಾರ ಟಿ.ಜೆ.ಎಸ್.ಜಾರ್ಜ್ (97) ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಶುಕ್ರವಾರ ನಿಧನರಾದರು.

ಮದ್ರಾಸ್ ಕ್ರಿಶ್ಚಿಯನ್ ಕಾಲೇಜಿನಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಪದವಿ ಪಡೆದಿದ್ದ ಜಾರ್ಜ್ ಮುಂಬೈನ ಫ್ರೀ ಪ್ರೆಸ್ ಜರ್ನಲ್‌ನಲ್ಲಿ ವೃತ್ತಿ ಜೀವನ ಆರಂಭಿಸಿದರು. ದಶಕಗಳ ಕಾಲ ಅವರು ಇಂಟರ್‌ನ್ಯಾಷನಲ್ ಪ್ರೆಸ್ ಇನ್ಸ್ಟಿಟ್ಯೂಟ್, ದಿ ಸರ್ಚ್‌ಲೈಟ್, ಫಾರ್ ಈಸ್ಟರ್ನ್ ಎಕನಾಮಿಕ್‌ಗೆ ಬರೆದಿದ್ದರು. ಹಾಂಗ್ ಕಾಂಗ್‌ನಲ್ಲಿ ಏಷ್ಯಾವೀಕ್‌ನ ಸ್ಥಾಪಕ ಸಂಪಾದಕರಾದರು.

ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನ ಸಂಪಾದಕೀಯ ಸಲಹೆಗಾರರಾಗಿ ಜಾರ್ಜ್ ಸಾಮಾಜಿಕ ಅನ್ಯಾಯ, ಭ್ರಷ್ಟಾಚಾರ ಸೇರಿ ಹಲವು ವಿಚಾರಗಳ ಬಗ್ಗೆ ಧ್ವನಿ ಎತ್ತಿದ್ದರು. ಸಾಪ್ತಾಹಿಕ ಅಂಕಣ ಪಾಯಿಂಟ್ ಆಫ್ ವ್ಯೂ 25 ವರ್ಷಗಳ ಕಾಲ ಬರೆದಿದ್ದರು. ಜೂನ್ 2022ರಲ್ಲಿ ಕೊನೆಯ ಬಾರಿ ಬರೆದು ತಮ್ಮ ಅಂಕಣ ಬರಹಕ್ಕೆ ಪೂರ್ಣ ವಿರಾಮ ಹಾಕಿದರು.

## ಶ್ರೇಯಸ್ ಪಟೇಲ್‌ಗೆ ಸಂಸತ್ ಸಮಿತಿಗಳಲ್ಲಿ ಸ್ಥಾನ

• ಪ್ರಜೋದಯ ವರದಿ



**ಹಾಸನ:** ಸಂಸದ ಶ್ರೇಯಸ್ ಪಟೇಲ್ ಅವರು ರಾಷ್ಟ್ರ ರಾಜಕಾರಣದಲ್ಲಿ ಪ್ರಮುಖ ಜವಾಬ್ದಾರಿ ಗಳನ್ನು ಪಡೆಯುವ ಮೂಲಕ ಗಮನ ಸೆಳೆದಿದ್ದಾರೆ. ಸಂಸತ್ತಿನ ಎರಡು ಮಹತ್ವದ ಸಮಿತಿಗಳಲ್ಲಿ ಮತ್ತು ಪಕ್ಷದ ಪ್ರಮುಖ ಕಾರ್ಯದಲ್ಲಿ ಅವರು ಸ್ಥಾನ ಗಿಟ್ಟಿಸಿಕೊಂಡಿದ್ದಾರೆ.

ಸಂಸತ್ತಿನಲ್ಲಿ ಇತ್ತೀಚೆಗೆ ಮರು ರಚಿಸಲಾದ ದಿವಾಳಿತನ ಹಾಗು ದಿವಾಳಿತನ ಸಂಹಿತೆ (ತಿದ್ದುಪಡಿ) ವಿಧೇಯಕ ಕುರಿತು ಸಲಹಾ ಸಮಿತಿ ಸದಸ್ಯರಾಗಿ ಸಂಸದ ಶ್ರೇಯಸ್ ಪಟೇಲ್ ಅವರು ನೇಮಕಗೊಂಡಿದ್ದಾರೆ. ಈ ಸಮಿತಿಯು ದೇಶದ ಆರ್ಥಿಕತೆಗೆ ಸಂಬಂಧಿಸಿದ ಈ ಪ್ರಮುಖ ಮತ್ತು ವಿವಾದಾತ್ಮಕ ವಿಧೇಯಕದ ಅಂಶಗಳನ್ನು ಆಳವಾಗಿ ಅಧ್ಯಯನ ಮಾಡಿ, ಸಂಸತ್ತಿಗೆ ವರದಿ ಸಲ್ಲಿಸಲಿದೆ.

ಸಲಹಾ ಸಮಿತಿಯ ಸದಸ್ಯತ್ವದ ಜೊತೆಗೆ, ಶ್ರೇಯಸ್ ಪಟೇಲ್ ಅವರು ಸಂಸತ್ತಿನ ವಾಣಿಜ್ಯ ಸ್ಥಾಯಿ ಸಮಿತಿಯಲ್ಲಿಯೂ ಸದಸ್ಯರಾಗಿ ಕಾರ್ಯ ನಿರ್ವಹಿಸಲಿದ್ದಾರೆ. ದೇಶದ ವ್ಯಾಪಾರ, ವಾಣಿಜ್ಯ ಮತ್ತು ಕೈಗಾರಿಕಾ ನೀತಿಗಳನ್ನು ಪರಿಶೀಲಿಸುವ ಈ ಸಮಿತಿಯಲ್ಲಿ ಅವಕಾಶ ಪಡೆದಿರುವುದು, ಹಾಸನದ ಸಂಸದರೊಬ್ಬರು ರಾಷ್ಟ್ರಮಟ್ಟದ ಉನ್ನತ ಆರ್ಥಿಕ ವಿಷಯಗಳ ಮೇಲೆ ಪ್ರಭಾವ ಬೀರುವ ಅವಕಾಶ ಸಿಕ್ಕಂತಾಗಿದೆ.

**ಒಡಿಶಾಗೆ ವಿಶೇಷ ವೀಕ್ಷಕರಾಗಿ ನೇಮಕ**

ಪಾರ್ಲಿಮೆಂಟ್ ಸಮಿತಿಗಳ ಜವಾಬ್ದಾರಿಗಳ ನಡುವೆಯೇ, ಕಾಂಗ್ರೆಸ್ ಹೈಕಮಾಂಡ್ ಇತ್ತೀಚೆಗೆ ಶ್ರೇಯಸ್ ಪಟೇಲ್ ಅವರನ್ನು ಒರಿಸ್ಸಾ ರಾಜ್ಯದ ವಿಶೇಷ ವೀಕ್ಷಕರನ್ನಾಗಿ ನೇಮಿಸಿದೆ. ಈ ಬೆಳವಣಿಗೆಯು, ಪಕ್ಷದ ನಾಯಕತ್ವವು ಅವರ ಸಂಘಟನಾ ಕೌಶಲ್ಯ ಮತ್ತು ಕ್ರಿಯಾಶೀಲತೆಯ ಮೇಲೆ ವಿಶ್ವಾಸ ವಿಟ್ಟಿದೆ ಎಂಬುದನ್ನು ಸೂಚಿಸುತ್ತದೆ. ನಿರಂತರವಾಗಿ ಕ್ರಿಯಾಶೀಲರಾಗಿರುವ ಹಾಸನದ ಯುವ ಸಂಸ ದರಿಗೆ ಅಲ್ಪಾವಧಿಯಲ್ಲಿಯೇ ಮಹತ್ವದ ರಾಷ್ಟ್ರ ಮಟ್ಟದ ಜವಾಬ್ದಾರಿಗಳು ಒದಗಿಬಂದಿರುವುದು, ಅವರು ರಾಷ್ಟ್ರ ರಾಜಕಾರಣದಲ್ಲಿ ಸಕಾರಾತ್ಮಕವಾಗಿದೆ.

## ಚಿಕ್ಕಹಳ್ಳಿ ಪಿಡಿಓ ಅಮಾನತಿಗೆ ಶಾಸಕ ಎ.ಮಂಜು ಆಗ್ರಹ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಚಿಕ್ಕಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಪಿ. ಮನು ವಿರುದ್ಧ ಭ್ರಷ್ಟಾಚಾರದ ಆರೋಪ ಕೇಳಿಬಂದಿದ್ದು ಅವರನ್ನು ಸೇವೆಯಿಂದ ಅಮಾನತು ಮಾಡುವಂತೆ ಶಾಸಕ ಎ.ಮಂಜು ಅವರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಅವರಿಗೆ ಪತ್ರ ಬರೆದಿದ್ದಾರೆ.

ಇ-ಸ್ವತ್ತು ವಿತರಿಸಲು ಸಾರ್ವಜನಿಕರು ಅರ್ಜಿ ಸಲ್ಲಿಸಿದ್ದರೂ ವಿತರಣೆ ಮಾಡದೆ ಹಾಗು ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ. 2024ರ ಆಗಸ್ಟ್ 23 ರಿಂದ 2025ರ ಮಾರ್ಚ್ 31ರವರೆಗೆ 15ನೇ ಹಣಕಾಸು ಯೋಜನೆ 1 ಮತ್ತು ನಿಧಿ 2ಕ್ಕೆ ಸಂಬಂಧಿಸಿ ಸಾಮಾನ್ಯ ಸಭೆ ನಡೆಸದೆ ಮತ್ತು ಗ್ರಾಮ ಪಂಚಾಯಿತಿ ಸದಸ್ಯರ ಗಮನಕ್ಕೆ ಬಾರದಂತೆ ಅನುದಾನ ದುರುಪಯೋಗ ಮಾಡಿಕೊಂಡಿದ್ದಾರೆ. ಕಚೇರಿಗೆ ಸರಿಯಾಗಿ ಹೋಗದೆ ಕರ್ತವ್ಯ ಲೋಪ ಎಸಗಿದ್ದಾರೆ. ಈ ಬಗ್ಗೆ ಜೂನ್ 30ರಂದು ತಮ್ಮ ಗಮನಕ್ಕೆ ತಂದರೂ ಯಾವುದೇ ಕ್ರಮ ಜರುಗಿಸಿಲ್ಲ. ನಿರ್ಲಕ್ಷ್ಯ ಮಾಡದೆ ತಕ್ಷಣವೇ ಪಿಡಿಓ ಅವರನ್ನು ಸೇವೆಯಿಂದ ಅಮಾನತು ಮಾಡಬೇಕೆಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.



**ಲಂಚಕ್ಕೆ ಬೇಡಿಕೆಯಿಟ್ಟ ವಿಡಿಯೋ ಸೆರೆ**

ಇನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಪಿ.ಮನು ಲಂಚಕ್ಕೆ ಬೇಡಿಕೆಯಿಟ್ಟಿರುವ ವಿಡಿಯೋ ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದೆ. ಕೆ.ಕೆ.ಮಹೇಶ್ ಎಂಬುವವರಿಗೆ ಎರಡು ಜಾಗದ ಇ-ಸ್ವತ್ತು ಮಾಡಿಕೊಡಲು ಪಿಡಿಓ 10 ಸಾವಿರ ರೂ.ಗೆ ಬೇಡಿಕೆಯಿಟ್ಟಿದ್ದಾನೆ. ಮೊದಲ ಹಂತದಲ್ಲಿ ಮಹೇಶ್ ಅವರು 4 ಸಾವಿರ ರೂ. ಲಂಚ ನೀಡಿದ್ದರು. ಒಂದು ಇ-ಸ್ವತ್ತು ನೀಡಿದ್ದ ಅಧಿಕಾರಿ ಮತ್ತೊಂದನ್ನು ವಿತರಿಸಲು ಹಣ ಬೇಕೆಂದು ಹಠ ಹಿಡಿದಿದ್ದ. ನಂತರ 5 ಸಾವಿರ ರೂ. ನೀಡಿದ್ದರು. ಆದರೂ ಹೆಚ್ಚಿನ ಹಣಕ್ಕೆ ಬೇಡಿಕೆ ಇಟ್ಟಿದ್ದ. ಹಣ ನೀಡದಿದ್ದರೆ ಯಾವ ಕೆಲಸವೂ ಆಗುವುದಿಲ್ಲ, ನಾಳೆ ತೆಗೆದುಕೊಂಡು ಬನ್ನಿರಿ ಎಂದು ವಾಪಾಸ್ ಕಳುಹಿಸಿದ್ದ. ಈ ವಿಡಿಯೋ ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ಎಲ್ಲಾ ಸಾಕ್ಷ್ಯಾಧಾರ ಪರಿಗಣಿಸಿ ಶಾಸಕ ಎ. ಮಂಜು ಅವರು ಪಿಡಿಓ ಅಮಾನತಿಗೆ ಆಗ್ರಹಿಸಿದ್ದಾರೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮನು ವಿರುದ್ಧ ಸಾಕಷ್ಟು ಆರೋಪಗಳಿವೆ. ಅವರ ವಿರುದ್ಧ ಕ್ರಮ ಜರುಗಿಸುವಂತೆ ಹಲವು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸುವುದಿಲ್ಲ. ಕರ್ತವ್ಯ ಲೋಪದ ಪ್ರಜ್ಞೆ ಇಲ್ಲದ ಅಧಿಕಾರಿಗಳು ಗ್ರಾಮದಲ್ಲಿರುವುದು ಬೇಡವೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

**ಬೇಲೂರಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ರೈತರ ಪ್ರತಿಭಟನೆ | ಸಕಲೇಶಪುರದಲ್ಲಿ ಅಪಾರ ಪ್ರಮಾಣದ ಬೆಳೆ ಹಾನಿ**

# ಮುಂದುವರೆದ ಕಾಡಾನೆಗಳ ದಾಂಧಲೆ: ರೈತರ ಆಕ್ರೋಶ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಾಡಾನೆಗಳ ದಾಂಧಲೆ ಮುಂದುವರೆದು ಅಪಾರ ಪ್ರಮಾಣದ ಬೆಳೆ ನಾಶವಾಗಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

ಬೇಲೂರು ತಾಲ್ಲೂಕಿನ ಕುಶಾವರ ಗ್ರಾಮದಲ್ಲಿ ಕಾಡಾನೆ ಹಾವಳಿಯಿಂದ ಬಳಲುತ್ತಿರುವ ರೈತರ ಅಳಲು ಆಲಿಸಬೇಕಾದ ಅರಣ್ಯಾಧಿಕಾರಿಗಳು, ರೈತರ ಮೇಲೆಯೇ ಪ್ರಕರಣ ದಾಖಲಿಸಲು ಪೊಲೀಸರಿಗೆ ಸೂಚನೆ ನೀಡಿದ್ದರಿಂದ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದ್ದಾರೆ.

ಅರಣ್ಯಾಧಿಕಾರಿಗಳ ವರ್ತನೆಗೆ ವಿರೋಧವ್ಯಕ್ತಪಡಿಸಿದ ರೈತರು ಅಧಿಕಾರಿಗಳ ಜೀಪ್ ಮುಂದೆ ಪ್ರತಿಭಟನೆ ನಡೆಸಿ ತೀವ್ರ ಆಕ್ರೋಶ ಹೊರಹಾಕಿದರು. ಇಂತಹ ದುರಹಂಕಾರ ತೋರಿಸುವ ಅಧಿಕಾರಿಗಳನ್ನು ತಕ್ಷಣ ವರ್ಗಾವಣೆ ಮಾಡಿ, ರೈತರ ಸಮಸ್ಯೆಗೆ ಸ್ಪಂದಿಸುವ ಅಧಿಕಾರಿಗಳನ್ನು



ನೇಮಿಸಬೇಕೆಂದು ರೈತರು ಪಟ್ಟು ಹಿಡಿದರು.

ನಾವು ಕಾಡಾನೆಗಳಿಂದ ಬೆಳೆ ಕಳೆದುಕೊಂಡು ಬದುಕು ತತ್ತರಿಸಿದೆವೆಂದು ಹೇಳಿದಾಗ, ನಮ್ಮ ಮೇಲೆಯೇ ಪ್ರಕರಣ ಹಾಕಿ ಬೆದರಿಸುತ್ತಾರೆ. ಅವರು ನೀಡುವ ಪರಿಹಾರ ನಮಗೆ ಬೇಡ, ಕಾಡಾನೆ ಸಮಸ್ಯೆಯಿಂದ ಮುಕ್ತಿ ಕೊಡಿಸಿದರೆ ಸಾಕು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಕಲೇಶಪುರ ತಾಲ್ಲೂಕಿನ ಹಾಡ್ಲಹಳ್ಳಿ, ಮೆಕ್ಕಿನ ಮನೆ ಗ್ರಾಮಗಳಲ್ಲಿ ಗಜಪಡೆ ದಾಂಧಲೆಗೆ ಕಾಫಿ, ಅಡಕೆ, ಮೆಣಸು ಸೇರಿ ಅಪಾರ ಪ್ರಮಾಣದ ಬೆಳೆ ನಾಶ ಮಾಡಿವೆ. ದೊರೆಸ್ವಾಮಿ, ಗುರುಶಾಂತೇಗೌಡ ಎಂಬುವವರಿಗೆ ಸೇರಿದ ಕಾಫಿ ತೋಟ ಆನೆ ದಾಂಧಲೆಯಿಂದ ಹಾಳಾಗಿದೆ. ಹತ್ತಾರು ವರ್ಷಗಳಿಂದ ಕಷ್ಟಪಟ್ಟು ಬೆಳೆದ ಕಾಫಿ, ಅಡಿಕೆ, ಮೆಣಸಿನ ಗಿಡಗಳನ್ನು ಕಳೆದುಕೊಂಡು ಬೆಳೆಗಾರರು ಕಂಗಾಲಾಗಿದ್ದಾರೆ. ಇದೇ ವೇಳೆ ಕಾಡಾನೆ ಸಮಸ್ಯೆಗೆ ಪರಿಹಾರ ಕಂಡು ಹಿಡಿಯದ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿರುವ ಸ್ಥಳೀಯರು, ಕಾಡಾನೆ ಹಾವಳಿಗೆ ಮುಕ್ತಿ ಕೊಡಿಸುವಂತೆ ಆಗ್ರಹಿಸಿದರು.

**ಹಲವೆಡೆ ಕಾಡಾನೆ ಸಂಚಾರ**

ಸಕಲೇಶಪುರ ತಾಲ್ಲೂಕಿನ ಸುಳ್ಳಕ್ಕಿ ವ್ಯಾಪ್ತಿಯ ಮೇಘಲಕೆರೆ ಗ್ರಾಮದ ರವಿ ಅವರ ತೋಟದ ಪಕ್ಕದ ಕಾಡು ಸುತ್ತಮುತ್ತ ಹಾಗು ಹೆತ್ತೂರು, ಯಸಳೂರು ಹೋಬಳಿಯ ಮರ್ಕಳ್ಳಿ ಗ್ರಾಮದ ಕಲ್ಲು ತೋಟ, ಜೇಡಿಗದ್ದೆ, ಬಾಚಿಯಳ್ಳಿ ಗ್ರಾಮದ ಹೊನ್ನೆಮನೆ ಕಾಡು, ಹೊಂಗಡ ಹಳ್ಳ ಗ್ರಾಮದ ಕಾಡುತೋಟ,ಮೆಕ್ಕಿರಮನೆ ಗ್ರಾಮದ ಹೆಗ್ಗೋಡ್ಲು, ಮತ್ತೂರು ಗ್ರಾಮದ ನೀಲಗಿರಿ ನಡುತೋಪು ಸುತ್ತಮುತ್ತ ಕಾಡಾನೆಗಳುಕಂಡುಬಂದಿವೆ. ಆಲೂರು ತಾಲ್ಲೂಕಿನ ಹಾಚಗೋಡನಹಳ್ಳಿ ಗ್ರಾಮದ ಅಕೇಶಿಯ ನೆಡುತೋಪು, ದೊಡ್ಡ ಬೆಟ್ಟ ಮೀಸಲು ಅರಣ್ಯ ಸುತ್ತಮುತ್ತ, ಬೇಲೂರು ತಾಲ್ಲೂಕಿನ ಮಾರಮ್ಮ ಟೆಂಪಲ್ ಕಾಡು ನಿಯರ್ ಐಬಿಸಿ ಎಸ್ಟೇಟ್ ನಂದಗೋಡನಹಳ್ಳಿ, ಚಿತ್ರಮ್ಮ ಮತ್ತು ಸೋಮೇಗೌಡರ ಬೆಂಡೆಕಾಡು ಕುಶಾವರ ಮತ್ತು ತಗರೆ, ಬೊಮ್ಮಡಿಹಳ್ಳಿ ರಿಸರ್ಚ್ ಫಾರೆಸ್ಟ್ ಸುತ್ತಮುತ್ತ ಕಾಡಾನೆಗಳು ಬೀಡುಬಿಟ್ಟಿವೆ.

CMYK CMYK CMYK CMYK


# ಭಾರತದ ಕೃಷಿ ಉತ್ಪನ್ನ, ಔಷಧಿ ಖರೀದಿಗೆ ರಷ್ಯಾ ಅಸ್ತು

• ಪ್ರಜೋದಯ ವರದಿ

**ಮಾಸ್ಕೋ:** ನವದೆಹಲಿಯಿಂದ ಭಾರೀ ಕಚ್ಚಾ ತೈಲ ಆಮದು ಉಂಟಾಗಿರುವುದರಿಂದ ಭಾರತದೊಂದಿಗೆ ವ್ಯಾಪಾರ ಅಸಮತೋಲನವನ್ನು ತಗ್ಗಿಸಲು ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳು ಮತ್ತು ಔಷಧಿಗಳನ್ನು ಖರೀದಿಸುವುದು ಸೇರಿದಂತೆ ಇನ್ನಿತರ ಕ್ರಮಗಳನ್ನು ರೂಪಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಆದೇಶಿಸಿದ್ದಾರೆ. ಡಿಸೆಂಬರ್ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ವಾರ್ಷಿಕ ಶೃಂಗಸಭೆಗಾಗಿ ಭಾರತಕ್ಕೆ ಭೇಟಿ ನೀಡುವ ವಾರಗಳ ಮೊದಲು ಪುಟಿನ್ ಅವರ ಘೋಷಣೆ ಬಂದಿದೆ.

ದಕ್ಷಿಣ ರಷ್ಯಾದ ಸೋಚಿಯ ಕಪ್ಪು ಸಮುದ್ರದ ರೆಸಾರ್ಟ್‌ನಲ್ಲಿ ಭಾರತ ಸೇರಿದಂತೆ 140 ದೇಶಗಳ ಭದ್ರತಾ ಮತ್ತು ಭೌಗೋಳಿಕ ರಾಜಕೀಯ ತಜ್ಞರ ಅಂತರರಾಷ್ಟ್ರೀಯ ವಾಲ್ಡೈ ಚರ್ಚಾ ವೇದಿಕೆಯಲ್ಲಿ ರಷ್ಯಾದ ಅಧ್ಯಕ್ಷರು ಮಾತನಾಡುತ್ತಿದ್ದರೂ ಅಮೆರಿಕದ ದಂಡನಾತ್ಮಕ ಸುಂಕಗಳಿಂದಾಗಿ ಭಾರತ ಎದುರಿಸುತ್ತಿರುವ ನಷ್ಟಗಳನ್ನು ರಷ್ಯಾದಿಂದ ಕಚ್ಚಾ ತೈಲ ಆಮದುಗಳಿಂದ ಸಮತೋಲನಗೊಳಿಸಲಾಗುತ್ತದೆ. ಜೊತೆಗೆ ಅದು ಸಾರ್ವಭೌಮ ರಾಷ್ಟ್ರವಾಗಿ ಪ್ರತಿಷ್ಠೆಯನ್ನು ಪಡೆಯುತ್ತದೆ ಎಂದು ಪುಟಿನ್ ಹೇಳಿದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನವದೆಹಲಿಯ ಮೇಲೆ ವಿಧಿಸಿದ ಹೆಚ್ಚುವರಿ 25 ಪ್ರತಿಶತ ಸುಂಕವನ್ನು ರಷ್ಯಾದ ತೈಲ ಖರೀದಿಗೆ ದಂಡವಾಗಿ ಉಲ್ಲೇಖಿಸುತ್ತಿದ್ದರು, ಇದು ಭಾರತದ ಮೇಲೆ ಅಮೆರಿಕ ವಿಧಿಸಿದ ಒಟ್ಟು ಸುಂಕಗಳನ್ನು ಶೇಕಡಾ 50 ಕ್ಕೆ ತರುತ್ತದೆ. ವ್ಯಾಪಾರ ಅಸಮತೋಲನವನ್ನು ತೆಗೆದುಹಾಕಲು, ರಷ್ಯಾ ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳು ಮತ್ತು ಔಷಧಿಗಳನ್ನು ಖರೀದಿಸಬಹುದು ಎಂದು ಪುಟಿನ್ ಹೇಳಿದರು.



ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳನ್ನು ಖರೀದಿಸಬಹುದು. ಔಷಧೀಯ ಉತ್ಪನ್ನಗಳು, ಔಷಧಗಳಿಗೆ ಸಂಬಂಧಿಸಿದಂತೆ ನಮ್ಮ ಕಡೆಯಿಂದ ಕೆಲವು ಕ್ರಮಗಳನ್ನು ಕೈಗೊಳ್ಳಬಹುದು ಎಂದು ಪುಟಿನ್ ಹೇಳಿದರು.

ಭಾರತೀಯ ಸ್ನೇಹಿತರು ಮತ್ತು ಸಹವರ್ತಿಗಳಿಗೆ ಸಹಕಾರದ ಅತ್ಯಂತ ಭರವಸೆಯ ಕ್ಷೇತ್ರಗಳು ಮತ್ತು ವ್ಯಾಪಾರ ಮತ್ತು ಇತರ ಕ್ಷೇತ್ರಗಳಲ್ಲಿನ ಅಸಮತೋಲನವನ್ನು ರಷ್ಯಾ ಹೇಗೆ ಸುಗಮಗೊಳಿಸಬಹುದು ಎಂಬ ಬಗ್ಗೆ ಪ್ರಸ್ತಾವನೆಗಳನ್ನು ಪರಿಗಣಿಸಲು ರಷ್ಯಾ ಸರ್ಕಾರಕ್ಕೆ ಸೂಚಿಸಿದ್ದೇನೆ ಎಂದು ಅಧ್ಯಕ್ಷರು ಹೇಳಿದರು.

ರಷ್ಯಾ ಮತ್ತು ಭಾರತದ ನಡುವಿನ ಆರ್ಥಿಕ ಸಹಕಾರಕ್ಕೆ ವ್ಯಾಪಕವಾದ ಸಾಮರ್ಥ್ಯವನ್ನು ಪುಟಿನ್ ಗಮನಿಸಿದರು. ಆದರೆ ಈ ಅವಕಾಶಗಳನ್ನು ಸಂಪೂರ್ಣವಾಗಿ ಅನ್ಲಾಕ್ ಮಾಡಲು ನಿರ್ದಿಷ್ಟ ಸಮಸ್ಯೆಗಳನ್ನು ಪರಿಹರಿಸುವ ಅಗತ್ಯವನ್ನು ಒಪ್ಪಿಕೊಂಡರು. ಹೋಲಿಕೆಗಾಗಿ, ರಷ್ಯಾ ಮತ್ತು ಭಾರತದ ನಡುವಿನ ವ್ಯಾಪಾರ ವಹಿವಾಟು ಸುಮಾರು 63 ಬಿಲಿಯನ್ ಮತ್ತು ಬೆಲಾರಸ್‌ನೊಂದಿಗೆ 50 ಬಿಲಿಯನ್ ಆಗಿದೆ ಎಂದು ಅವರು ಹೇಳಿದರು. ಅದೇ ಸಮಯದಲ್ಲಿ, ಭಾರತದಲ್ಲಿ ಜನಸಂಖ್ಯೆ 1.5 ಬಿಲಿಯನ್ ಮತ್ತು ಬೆಲಾರಸ್‌ನಲ್ಲಿ 10 ಮಿಲಿಯನ್. ಇದು ನಮ್ಮ ಸಂಭಾವ್ಯ ಅವಕಾಶಗಳಿಗೆ ಸ್ಪಷ್ಟವಾಗಿ ಹೊಂದಿಕೆಯಾಗುವುದಿಲ್ಲ ಎಂದು ಪುಟಿನ್ ಒತ್ತಿ ಹೇಳಿದರು.

ನಮ್ಮ ಅವಕಾಶಗಳು ಮತ್ತು ಸಂಭಾವ್ಯ ಅನುಕೂಲಗಳನ್ನು ಅನ್ಲಾಕ್ ಮಾಡಲು ನಾವು ಸಂಪೂರ್ಣ ಶ್ರೇಣಿಯ ಕಾರ್ಯಗಳನ್ನು ಪರಿಹರಿಸಬೇಕಾಗಿದೆ ಎಂದು ಪುಟಿನ್ ಹೇಳಿದರು. ಹಣಕಾಸು, ಲಾಜಿಸ್ಟಿಕ್ಸ್ ಮತ್ತು ಪಾವತಿ ಅಡಚಣೆಗಳನ್ನು ಪ್ರಮುಖ ಕಾಳಜಿಗಳಾಗಿ ಗುರುತಿಸಿದರು. ರಷ್ಯಾ ಭಾರತದೊಂದಿಗೆ ಯಾವುದೇ ಸಮಸ್ಯೆಗಳನ್ನು ಅಥವಾ ಅಂತರ ರಾಜ್ಯ ಉದ್ವಿಗ್ನತೆಯನ್ನು ಎಂದಿಗೂ ಹೊಂದಿರಲಿಲ್ಲ ಎಂದು ಪುಟಿನ್ ಒತ್ತಿ ಹೇಳಿದರು ಮತ್ತು ಎರಡೂ ದೇಶಗಳು ಯಾವಾಗಲೂ ಆಯಾ ಸೂಕ್ಷ್ಮತೆಗಳನ್ನು ಗಮನದಲ್ಲಿಟ್ಟುಕೊಂಡು ಕ್ರಮಗಳನ್ನು ತೆಗೆದುಕೊಂಡವು ಎಂದು ಗಮನಿಸಿದರು.

ವಿಶೇಷವಾಗಿ ರಷ್ಯಾದಿಂದ ತೈಲ ಆಮದುಗಳನ್ನು ನಿಲ್ಲಿಸಲು ಅಮೆರಿಕದ ಒತ್ತಡವನ್ನು ನಿರ್ಲಕ್ಷಿಸುವ ಭಾರತದ ನಿರ್ಧಾರದ ಬಗ್ಗೆ. ರಷ್ಯಾ ಮತ್ತು ಭಾರತದ ನಡುವಿನ ವಿಶೇಷ ಕಾರ್ಯತಂತ್ರದ ಸವಲತ್ತು ಪಾಲುದಾರಿಕೆಯ ಘೋಷಣೆಯು ಶೀಘ್ರದಲ್ಲೇ ತನ್ನ 15 ನೇ ವಾರ್ಷಿಕೋತ್ಸವವನ್ನು ಆಚರಿಸಲಿದೆ ಎಂದು ಪುಟಿನ್ ನೆನಪಿಸಿಕೊಂಡರು. ಅವರು ತಮ್ಮ ರಾಜಕೀಯ ಸಂಬಂಧಗಳಲ್ಲಿ, ರಷ್ಯಾ ಮತ್ತು ಭಾರತ ಯಾವಾಗಲೂ ತಮ್ಮ ಕಾರ್ಯಗಳನ್ನು ಸಮನ್ವಯಗೊಳಿಸುತ್ತವೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

## ವಿಜಯದಶಮಿ ಹಬ್ಬ ಸತ್ಯದ ಪ್ರತಿಬಿಂಬ



• ಪ್ರಜೋದಯ ವರದಿ

**ಬೇಲೂರು:** ವಿಜಯದಶಮಿ ಹಬ್ಬದ ಅಂಗವಾಗಿ ಕಂದಾಯ ಇಲಾಖೆ ಕಸಬಾ ವಲಯದ ಜಮಾಬಂಧಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಕಾರ್ಯಕ್ರಮಕ್ಕೆ ತಹಸಿಲ್ದಾರ್ ಶ್ರೀಧರ್ ಕಂಕನವಾಡಿ ಚಾಲನೆ ನೀಡಿದರು.

ನಂತರ ಮಾತನಾಡಿ, ವಿಜಯದಶಮಿ ಹಬ್ಬವು ಸತ್ಯ, ಧರ್ಮ ಮತ್ತು ನ್ಯಾಯದ ಜಯವನ್ನು ಪ್ರತಿಬಿಂಬಿಸುತ್ತದೆ. ಈ ಹಬ್ಬದ ಹಿನ್ನೆಲೆಯಲ್ಲಿ, ನಾವು ಕೂಡಾ ಸಾರ್ವಜನಿಕರಿಗೆ ನ್ಯಾಯಯುತ, ಪಾರದರ್ಶಕ ಹಾಗೂ ಸಮರ್ಥ ಸೇವೆ ನೀಡಲು ಬದ್ಧರಾಗಿರಬೇಕು. ಅಧಿಕಾರಿಗಳು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನೆರವೇರಿಸಿದರೆ, ಸಾರ್ವಜನಿಕರ ವಿಶ್ವಾಸ ಹೆಚ್ಚಾಗುತ್ತದೆ. ಜನರಿಗೆ ದೋಷ ಇಲ್ಲದೆ, ಸುಲಭವಾಗಿ ಸೇವೆ ದೊರಕುವಂತೆ ಕ್ರಮಗಳನ್ನು ಕೈಗೊಳ್ಳುವುದು ನಮ್ಮ ಧ್ಯೇಯ ಎಂದರು.

ನಾವು ನಮ್ಮ ಕರ್ತವ್ಯಕ್ಕೆ ಸದಾ ನಿಷ್ಠೆಯಿಂದ ಕೆಲಸ ಮಾಡಿದರೆ, ಹಬ್ಬದ ಸಾರ್ಥಕತೆ ಹೆಚ್ಚಾಗುತ್ತದೆ. ಪ್ರತಿ ಹಬ್ಬವು ನಮ್ಮ ಸೇವೆ ಮನೋಭಾವವನ್ನು ಸುಧಾರಿಸಲು ಪ್ರೇರಣೆ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಸಬಾ ವಲಯದ ಅಧಿಕಾರಿಗಳು, ಕಂದಾಯ ಇಲಾಖೆಯ ಸಿಬ್ಬಂದಿ, ಸ್ಥಳೀಯ ನೌಕರರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು. ಹಬ್ಬದ ಸಂದರ್ಭದಲ್ಲಿ ಜನರಿಗೆ ಕಂದಾಯ ಇಲಾಖೆಯಿಂದ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲಾಯಿತು.

## ಎಸ್.ಎಲ್.ಬೈರಪ್ಪರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿ

• ಪ್ರಜೋದಯ ವರದಿ

**ಬೆಂಗಳೂರು:** ಇತ್ತೀಚಿಗೆ ನಿಧನರಾದ ಖ್ಯಾತ ಕದಂಬರಿಕಾರ, ಹಾಗೂ ಪ್ರತಿಷ್ಠಿತ ಪದವಿಭೂಷಣ ಪ್ರಶಸ್ತಿ ಪುರಸ್ಕೃತ ಎಸ್.ಎಲ್ ಬೈರಪ್ಪ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡಬೇಕೆಂದು ಮೈಸೂರು ಕ್ಷೇತ್ರದ ಸಂಸದ, ರಾಜವಂಶಸ್ಥ ಯದುವೀರ್ ಒಡೆಯರ್ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಸಂಸದ ಯದುವೀರ್ ಒಡೆಯರ್, ಕನ್ನಡದ ಜನಮನ್ನಣೆಯ ಮೇರು ಸಾಹಿತಿ ಮಹಾನ್ ಕಾದಂಬರಿಕಾರರು ಹಾಗೂ ಸರಸ್ವತಿ ಸವಾನ ಪದಭೂಷಣ ಡಾ. ಎಸ್.ಎಲ್. ಭೈರಪ್ಪ ಅವರ ಅಗಲಿಕೆಯು ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ.

ಅವರನ್ನು ಗೌರವಿಸಲು, ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿಯನ್ನು ನೀಡುವಂತೆ ಮತ್ತು ಮೈಸೂರು ನಗರ ಕೇಂದ್ರ ಗ್ರಂಥಾಲಯವನ್ನು ಅವರ ಸರಣಾರ್ಥ ಮರುನಾಮಕರಣ ಮಾಡಬೇಕೆಂದು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೇನೆ ಎಂದು ಅವರು ತಿಳಿಸಿದ್ದಾರೆ. ಇತ್ತೀಚಿಗಷ್ಟೇ ರಾಜ್ಯ ಸರ್ಕಾರ ಕರ್ನಾಟಕ ರತ್ನ ಪ್ರಶಸ್ತಿಯನ್ನು ಖ್ಯಾತ ನಟ ಡಾ. ವಿಷ್ಣುವರ್ಧನ್ ಹಾಗೂ ಚಿತ್ರನಟಿ ಬಿ ಸರೋಜದೇವಿ ಅವರಿಗೆ ಮರಣೋತ್ತರವಾಗಿ ಈ ಪ್ರಶಸ್ತಿಯನ್ನು ಘೋಷಣೆ ಮಾಡಿತ್ತು.

ಕರ್ನಾಟಕ ರತ್ನ ಪ್ರಶಸ್ತಿಯು ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾಗಿದೆ. ಕರ್ನಾಟಕ ರತ್ನ ಪ್ರಶಸ್ತಿಯನ್ನು ಪಡೆಯುವವರಿಗೆ 50 ಗ್ರಾಂ ತೂಕದ ಚಿನ್ನದ ಪದಕ, ನೆನಪಿನ ಕಾಣಿಕೆ ನೀಡಿ, ಶಾಲನ್ನು ಹೊದಿಸಿ ಗೌರವಿಸಲಾಗುತ್ತದೆ. ಕರ್ನಾಟಕ ರತ್ನ ಪ್ರಶಸ್ತಿಯನ್ನು ಈವರೆಗೆ ಒಂಬತ್ತು ಸಾಧಕರಿಗೆ ನೀಡಲಾಗಿದೆ. ಕರ್ನಾಟಕ ರತ್ನ ಪ್ರಶಸ್ತಿಯನ್ನು ಮೊದಲ ಬಾರಿಗೆ 1991 ರಲ್ಲಿ ಆರಂಭಿಸಲಾಯಿತು. ಈ ಪ್ರಶಸ್ತಿಯನ್ನು ಯಾವುದೇ ಕ್ಷೇತ್ರದಲ್ಲಿ ಅಸಾಧಾರಣ ಕೊಡುಗೆಯನ್ನು ನೀಡಿದ ವ್ಯಕ್ತಿಗಳಿಗೆ ನೀಡಲಾಗುತ್ತದೆ. ಕರ್ನಾಟಕ ಪ್ರಶಸ್ತಿಯನ್ನು ಮೊದಲ ಬಾರಿಗೆ 1992 ರಲ್ಲಿ ನೀಡಲಾಯಿತು.

ಮೊದಲ ಕರ್ನಾಟಕ ರತ್ನ ಪ್ರಶಸ್ತಿಯನ್ನು ರಾಷ್ಟ್ರಕವಿ ಕುವೆಂಪು ಅವರಿಗೆ ನೀಡಿ ಗೌರವಿಸಲಾಯಿತು. ಅಲ್ಲಿಂದ ಇಲ್ಲಿಯವರೆಗೂ ಹತ್ತು ವ್ಯಕ್ತಿಗಳಿಗೆ ಈ ಪ್ರಶಸ್ತಿಯನ್ನು ನೀಡಲಾಗಿದೆ. ಈ ಬಾರಿ ಅಂದರೆ 2021ರ ಕರ್ನಾಟಕ ರತ್ನ ಪ್ರಶಸ್ತಿಯನ್ನು ಚಿತ್ರ ನಟ ಪುನೀತ್ ರಾಜ್‌ಕುಮಾರ್ ಅವರಿಗೆ ಮರಣೋತ್ತರ ಪ್ರಶಸ್ತಿಯನ್ನು ರಾಜ್ಯ ಸರ್ಕಾರ ಘೋಷಣೆ ಮಾಡಿದೆ.

## ಕೋಡಿಮಠದಲ್ಲಿ ಶಮಿ ಪೂಜೆ

• ಪ್ರಜೋದಯ ವರದಿ

**ಹಾರನಹಳ್ಳಿ:** ಶ್ರೀ ಕ್ಷೇತ್ರ ಕೋಡಿ ಮಠದಲ್ಲಿ ಮಠದ ಸಂಪ್ರದಾಯದಂತೆ ಶ್ರೀ ಕ್ಷೇತ್ರದ ಪೂಜ್ಯ ಗುರುಗಳಾದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು ನವರಾತ್ರಿ ವಿಜಯ ದಶಮಿಪ್ರಯುಕ್ತ ಶಮಿ ಪೂಜೆ ನೆರವೇರಿಸಿದರು.

ಶ್ರೀ ಮಠ ಮುಂಭಾಗ ಬಾಳೆ ಕಂದು ಶಮಿ ಪತ್ರೆ ಪೂಜೆ ನಡೆದ ನಂತರ ಅಂಬು ನಡೆಯಿತು.

ನವರಾತ್ರಿ ದೇವಿಯ ಪೂಜೆ ಆರಾಧನೆಯ ಶಕ್ತಿ ಸಂಕೇತ ವಿಜಯದಶಮಿ ವಿಜಯದ ಸಂಕೇತವಾಗಿದ್ದು ನಾಡಿನ ಸಮಸ್ತ ಪ್ರಜೆಗಳ ಸಮಸ್ಯೆಗಳು ದೂರವಾಗಿ ಎಲ್ಲಾ ಕೆಲಸಗಳಲ್ಲಿ ವಿಜಯ ಸಾಧಿಸಲ್ಲಿ ಎಂದು ಗುರುಗಳು ಆಶೀರ್ವದಿಸಿದರು. ಶ್ರೀಮಠದ ಭಕ್ತರು ಸುತ್ತಮುತ್ತಲ ಗ್ರಾಮಸ್ಥರು ಈ



ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶ್ರೀ ಶಿವಲಿಂಗೇಶ್ವರ ಸ್ವಾಮಿ ಗದ್ದಿಗೆ ವಿಶೇಷ ಅಲಂಕಾರಪೂಜೆ ಸಲ್ಲಿಸಲಾಯಿತು.

ಗುತ್ತಿನಕೆರೆ ರಂಗನಾಥಸ್ವಾಮಿ ಯಾದಾಪುರದ ಶ್ರೀ ಜೇನುಕಲ್ ಸಿದ್ದೇಶ್ವರ ಸ್ವಾಮಿ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ಬನ್ನಿ ಪೂಜೆ ಅಂಬಿನ ಸೇವೆಗಳು ನಡೆಯಿತು.

## ಆಪರೇಷನ್ ಸಿಂಧೂರ: ಪಾಕ್‌ನ 5 ಯುದ್ಧ ವಿಮಾನ ನಾಶ

• ಪ್ರಜೋದಯ ವರದಿ

**ನವದೆಹಲಿ:** ಭಾರತ ಸ್ಪಷ್ಟ ಉದ್ದೇಶಗಳೊಂದಿಗೆ ಆಪರೇಷನ್ ಸಿಂಧೂರ ಆರಂಭಿಸಿತ್ತು. ಗುರಿ ಸಾಧನೆ ಬಳಿಕ ಕಾರ್ಯಾಚರಣೆ ನಿಲ್ಲಿಸಿದ್ದು ಜಗತ್ತಿಗೆ ಸಂದೇಶ ಸಾರಿದೆಯೆಂದು ವಾಯುಪಡೆ (ಐಎಎಫ್) ಮುಖ್ಯಸ್ಥ ಎ.ಪಿ. ಸಿಂಗ್ ಶುಕ್ರವಾರ ತಿಳಿಸಿದ್ದಾರೆ.

ವಾಯುಸೇನೆ ದಿನದ (ಅ.8) ಹಿನ್ನಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿರುವ ಏರ್ ಚೀಫ್ ಮಾರ್ಷಲ್ ಸಿಂಗ್, ಐಎಎಫ್ 2047ರ ಹೊತ್ತಿಗೆ ತನ್ನ ಯುದ್ಧ ಸಾಮರ್ಥ್ಯವನ್ನು ಬಲಪಡಿಸಿಕೊಳ್ಳುವ ನಿಟ್ಟಿನಲ್ಲಿ ಮಾರ್ಗಸೂಚಿ ಸಿದ್ಧಪಡಿಸಿಕೊಂಡಿದೆ ಎಂದಿದ್ದಾರೆ.

ಆಪರೇಷನ್ ಸಿಂಧೂರ ಸಮಯದಲ್ಲಿ ಪಾಕಿಸ್ತಾನಕ್ಕೆ ಆಗಿರುವ ಹಾನಿಯ



ಕುರಿತು, ಒಂದು ವಾಯುಗಾಮಿ ಮುನ್ಸೂಚನೆ ಮತ್ತು ನಿಯಂತ್ರಣ ವ್ಯವಸ್ಥೆ, ವಿಮಾನ ಹಾಗು ನಾಲ್ಕರಿಂದ ಐದು ಯುದ್ಧ ವಿಮಾನಗಳ ನಾಶವಾಗಿರುವುದಕ್ಕೆ ಪುರಾವೆಗಳಿವೆ ಎಂದಿದ್ದಾರೆ.

ಪಾಕಿಸ್ತಾನದ ರಡಾರ್‌ಗಳು, ಕಮಾಂಡ್‌ಕಂಟ್ರೋಲ್ ಕೇಂದ್ರಗಳು, ರನ್ ವೇಗಳ ಮೇಲೂ ದಾಳಿ ನಡೆಸಿದ್ದೇವೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ಏಪ್ರಿಲ್ 22 ರಂದು ಗುಂಡಿನ ದಾಳಿ ನಡೆಸಿದ್ದರು. ಅದಕ್ಕೆ ಪ್ರತಿಯಾಗಿ ಭಾರತೀಯ ಪಡೆಗಳು ಪಾಕ್ ಆಕ್ರಮಿತ ಕಾಶ್ಮೀರ ಹಾಗು ಪಾಕಿಸ್ತಾನದಲ್ಲಿನ ಉಗ್ರರ ನೆಲೆಗಳನ್ನು ಗುರಿಯಾಗಿಸಿ ಮೇ 7 ರಂದು 'ಆಪರೇಷನ್ ಸಿಂಧೂರ' ಆರಂಭಿಸಿತ್ತು. ಬೆನ್ನಲ್ಲೇ, ಪಾಕಿಸ್ತಾನ ಸೇನೆ ಭಾರತದ ಮೇಲೆ ದಾಳಿ ಮಾಡಿತ್ತು. ಅದರಿಂದ ಉಭಯ ರಾಷ್ಟ್ರಗಳ ನಡುವೆ ಸಂಘರ್ಷ ತೀವ್ರಗೊಂಡಿತ್ತು. ಪಾಕ್ ದಾಳಿಯನ್ನು ಭಾರತೀಯ ಸೇನೆ ಯಶಸ್ವಿಯಾಗಿ ಹಿಮ್ಮೆಟ್ಟಿಸಿತ್ತು. ಮೇ 10ರಂದು ಕದನ ವಿರಾಮ ಘೋಷಣೆಯಾಗಿದೆ.

## ಇಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲೆಯ ಎಲ್ಲಾ ಹಿರಿಯ ನಾಗರಿಕರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಅ.04 ರಂದು ಬೆ.11 ಗಂಟೆಗೆ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಅವರು ಗೌರವ ಉಪಸ್ಥಿತಿವಹಿಸ ಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ.ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್ ರೇವಣ್ಣ ಹಾಗೂ ಮಹಾನಗರ ಪಾಲಿಕೆಯ ಮಹಾಪೌರರಾದ ಗಿರೀಶ್ ಚನ್ನವಿರಪ್ಪ ಅವರು ಭಾಗವಹಿಸಲಿದ್ದಾರೆ.

ಹಿರಿಯ ನಾಗರಿಕರ ಪಾಲನೆ ಪೋಷಣೆ ಸಂರಕ್ಷಣೆಗಾಗಿ ರೂಪಿಸಿರುವ ಕಾಯ್ದೆ ಮತ್ತು ನಿಯಮಗಳು ಕುರಿತು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಅವರು ಉಪನ್ಯಾಸ ನೀಡಲಿದ್ದಾರೆ.

## ಬನ್ನಿ ಮಂಟಪದಲ್ಲಿ ಮೇಳೈಸಿದ ಕೇಶವನ ಶಮಿ ಪೂಜೆ

• ಪ್ರಜೋದಯ ವರದಿ

**ಬೇಲೂರು:** ವಿಶ್ವ ವಿಖ್ಯಾತ ಬೇಲೂರು ಚನ್ನಕೇಶವಸ್ವಾಮಿ ದೇಗುಲದಲ್ಲಿ ವಿಜಯದಶಮಿ ಅಂಗವಾಗಿ ಪಟ್ಟಣದ ಸಮೀಪವಿರುವ ಬಂಟೇನಹಳ್ಳಿ ಬನ್ನಿ ಮಂಟಪದಲ್ಲಿ ಅಶ್ವರೂಢ ಚನ್ನಕೇಶವ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ನೆರದ ನೂರಾರು ಭಕ್ತರ ಸಮ್ಮುಖದಲ್ಲಿ ಶಮಿ ಪತ್ರೆಯನ್ನು ಪ್ರಸಾದ ರೂಪದಲ್ಲಿ ಹಂಚುವ ಮೂಲಕ ವಿಜಯದಶಮಿ ಹಬ್ಬವನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಶಿಲ್ಪಕಲಾ ನಾಡು ಹಾಗೂ ಚನ್ನಕೇಶವ ಸ್ವಾಮಿ ಬೀಡು ಬೇಲೂರಿನ ಚನ್ನಕೇಶವಸ್ವಾಮಿ ದೇಗುಲದಲ್ಲಿ ಇಂದಿಗೂ ಶರನ್ನವರಾತ್ರಿ ದಿನಗಳಂದು ದೇಗುಲದಲ್ಲಿ ವಿವಿಧ ಉತ್ಸವಗಳ ಜೊತೆಗೆ ಪೂಜಾ ಕೈಂಕರ್ಯಗಳು ಮತ್ತು



ಲೋಕಾಕಲ್ಯಾಣಾರ್ಥ ಹೋಮ ಹವನಗಳನ್ನು ನಡೆಸುವ ಪದ್ಧತಿ ವಿಜಯನಗರದ ಅರಸರು ಮತ್ತು ಮೈಸೂರು ಒಡೆಯರ ಕಾಲದಿಂದ ನಡೆಸಲಾಗುತ್ತಿದೆ. ಅಂತಿಮ ದಿನ ವಿಜಯ ದಶಮಿಯಂದು ಕೇಶವನೊಬ್ಬನ ಉತ್ಸವ ಮೂರ್ತಿ ಅಶ್ವರೋಹಿಯಾಗಿ ದೇಗುಲದಿಂದ ಹೊರಟು ನೆಹರನಗರದ ಮೂಲಕ ಬಂಟೇನಹಳ್ಳಿ ಬನ್ನಿ ಮಂಟಪಕ್ಕೆ ನಗರದಿಂದ ಆಗಮಿಸುತ್ತದೆ.

ಈ ಸಂದರ್ಭದಲ್ಲಿ ಇಲ್ಲಿನ ಪ್ರಧಾನ ಅರ್ಚಕರು ದೇಗುಲ ಆಡಳಿತ, ತಾಲ್ಲೂಕು ಆಡಳಿತ ಜೊತೆಯಲ್ಲಿದ್ದು ಬನ್ನಿ ಮಂಟಪದಲ್ಲಿ ವಿವಿಧ ಪೂಜೆ ಸಲ್ಲಿಸಿ ಮಹಾ ಮಂಗಳಾರತಿ ಬಳಿಕ ಪಕ್ಕದಲ್ಲಿರುವ ಬನ್ನಿ ಮರದ ಕೆಳಗೆ ದೇಗುಲದ ಆಯುಧಗಳನ್ನು ಇಟ್ಟು, ಶಮಿಯನ್ನು ಕತ್ತರಿಸಿ ಭಕ್ತರಿಗೆ ಹಂಚುವ ಪದ್ಧತಿ ಇಂದಿಗೂ ನಡೆಸಿಕೊಂಡು ಬಂದಿದ್ದಾರೆ. ಈ ಹಿಂದೆ ರಾಜರ ಆಡಳಿತಾವಧಿಯಲ್ಲಿ ಉತ್ಸವದೊಂದಿಗೆ ಸಮವಸ್ತ್ರ ಸಹಿತ ಆಯುಧ ಹಿಡಿದ ಪೊಲೀಸರು, ಮಿಲಿಟರಿ, ಸಿಪಾಯಿಗಳು ಇರುತ್ತಿದ್ದರು. ನವರಾತ್ರಿಯ 10 ದಿನಗಳು ಪಟ್ಟಣದ ದೇವಾಂಗ ಸಮುದಾಯಕ್ಕೆ ಪತಾಕೆಗಳ ಹಿಡಿಯುವ ಹೊಣೆ ನೀಡಲಾಗಿತ್ತು. ವರ್ಷ ಕಳೆದಂತೆ ಇದೆಲ್ಲವೂ ಸ್ಥಗಿತಗೊಂಡಿದೆ. ಅಂದು ಬಂಟೇನಹಳ್ಳಿಯ ಪಟೇಲರು ಬನ್ನಿಮಂಟಪದ ಸ್ವಚ್ಛತೆ ಜವಾಬ್ದಾರಿ ಹೊತ್ತಿದ್ದರು. ಇಂದು ಗ್ರಾಪಂ ವ್ಯವಸ್ಥೆ ಮಾಡುತ್ತಿದೆ ಕಾಲಕಳೆದಂತೆ ಸಂಪ್ರದಾಯ ಕಣ್ಮರೆಯಾಗುತ್ತಿದೆ ಎಂದು ಭಕ್ತರು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ, ಚನ್ನಕೇಶವ ದೇಗುಲ ಕಾರ್ಯನಿರ್ವಾಹಕ ಅಧಿಕಾರಿ ಯೋಗೀಶ್, ದೇಗುಲದ ಆಗಮಿಕರಾದ ನರಸಿಂಹಭಟ್ಟರ್ ಹಾಗೂ ರಂಗನಾಥ, ಬಾಳೆಹಣ್ಣು ರಮೇಶ್, ವೆಂಕಟೇಶ, ಶ್ರೀನಿವಾಸ, ಚಂದ್ರಣ್ಣ ಇನ್ನೂ ಮುಂತಾದವರು ಭಾಗವಹಿಸಿದ್ದರು.

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಮಾಹಿತಿ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ 2025-26ನೇ ಸಾಲಿನಲ್ಲಿ ಹಾಸನ ಜಿಲ್ಲಾದ್ಯಾಂತ ವಿದ್ಯುತ್ ಸಂಪರ್ಕ ಪಡೆದ 5,34,339 ಮನೆಗಳಿಗೂ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ಮಾಡುವ ಸಂಬಂಧ ಈಗಾಗಲೇ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ (ಚೆಸ್ಕಾಂ) ಇಲಾಖೆ ವತಿಯಿಂದ ಆರ್. ಆರ್.ನಂಬರ್ ಹೊಂದಿರುವ ಮನೆಗಳಿಗೆ ಜಿಯೋ ಟ್ಯಾಗ್ ಸ್ಟಿಕರ್ ಅಳವಡಿಸಲಾಗಿರುತ್ತದೆ.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025 ರ ಮನೆ ಮನೆ ಸಮೀಕ್ಷೆಯನ್ನು ಸೆ.22 ರಿಂದ ಅ.07 ರವರೆಗೆ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯ ಕೈಗೊಂಡಿದ್ದು, ಗಣತಿದಾರರು ಜಿಲ್ಲೆಯ ನಾಗರೀಕ ಮನೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಕುಟುಂಬದ ಪಡಿತರ ಚೀಟಿ, ಆಧಾರ್ ಸಂಖ್ಯೆ, ವಿಶೇಷ ಚೇತನರು ಕುಟುಂಬದಲ್ಲಿದ್ದರೆ ಯು.ಡಿ.ಐ.ಡಿ ಸಂಖ್ಯೆಯನ್ನು ಗಣತಿದಾರರಿಗೆ ನೀಡಬೇಕಾಗಿರುತ್ತದೆ. ಪ್ರತಿ ಕುಟುಂಬದ ಸದಸ್ಯರ ಆಧಾರ್ ಕಾರ್ಡ್‌ಗಳು ಮೊಬೈಲ್ ನಂಬರ್‌ಗಳಿಗೆ ಲಿಂಕ್ ಆಗಿರುವುದನ್ನ ಖಚಿತಪಡಿಸಿಕೊಳ್ಳುವುದು ಅಗತ್ಯವಾಗಿರುತ್ತದೆ ಹಾಗೂ ಸಮೀಕ್ಷೆ ವೇಳೆ ಪ್ರಕ್ರಿಯೆಗಾಗಿ ಒ.ಟಿ.ಪಿ. ಸಂಖ್ಯೆ ಆ ಸದಸ್ಯರ ಆಧಾರ್ ನಂಬರ್‌ಗೆ ಜೊಡಣೆ ಆಗಿರುವ ಮೊಬೈಲ್ ನಂಬರ್‌ಗೆ ಬರುತ್ತದೆ. ಒಂದು ವೇಳೆ ಆ ಸದಸ್ಯರ ಮನೆಯಲ್ಲಿ ಇಲ್ಲದಿದ್ದರೆ ಕುಟುಂಬದ ಪರವಾಗಿ ಉತ್ತರ ನೀಡುತ್ತಿರುವ ಸದಸ್ಯರ ಫೋನ್ ಮೂಲಕ ಒ.ಟಿ.ಪಿ. ಸಂಖ್ಯೆಯನ್ನು ನೀಡಬೇಕು.

## ವಿಂಡೀಸ್ ವಿರುದ್ಧ ಭಾರತ ಬೃಹತ್ ಮುನ್ನಡೆ

• ಪ್ರಜೋದಯ ವರದಿ

ಅಹಮದಾಬಾದ್: ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಕನ್ನಡಿಗ ಕೆ.ಎಲ್. ರಾಹುಲ್ ಶತಕ ಬಾರಿಸಿದ್ದಾರೆ. ರಾಹುಲ್ 197 ಎಸೆತಗಳಲ್ಲಿ 12 ಬೌಂಡರಿ ಸಹಿತ 100 ರನ್ ಗಳಿಸಿದರು. ಇದು ಅವರ ವೃತ್ತಿ ಜೀವನದ 11ನೇ ಹಾಗೂ ಭಾರತದ ನೆಲದಲ್ಲಿ 2ನೇ ಶತಕವಾಗಿದೆ. ಎರಡನೇ ದಿನ 448ರನ್‌ಗಳಿಸಿದೆ.

ಇಡೀ ದಿನ ವೆಸ್ಟ್ ಇಂಡೀಸ್ ಬೌಲರ್‌ಗಳು ಕೇವಲ 3 ವಿಕೆಟ್ ಮಾತ್ರ ಪಡೆಯಲು ಸಾಧ್ಯವಾಯಿತು. ಮೂವರು ಭಾರತೀಯ ಬ್ಯಾಟರ್‌ಗಳು ಶತಕ ಸಿಡಿಸಿ ಮಿಂಚಿದರು.

ರಾಹುಲ್ ವಿಕೆಟ್ ನಂತರ ನಂತರ ಒಂದಾದ ಜುರೆಲ್-ಜಡೇಜಾ 5ನೇ ವಿಕೆಟ್ ಜೊತೆಯಾಟದಲ್ಲಿ 206 ರನ್‌ಗಳ ಜೊತೆಯಾಟ ನಡೆಸಿದರು. ಈ ಇಬ್ಬರು ಬ್ಯಾಟರ್‌ಗಳು 55.1 ಓವರ್‌ಗಳ ಕಾಲ ವಿಂಡೀಸ್ ಬೌಲರ್‌ಗಳನ್ನ ಹೈರಾಗೊಳಿಸಿದರು. ಜುರೆಲ್ 210 ಎಸೆತಗಳಲ್ಲಿ 15 ಬೌಂಡರಿ, 3 ಸಿಕ್ಸರ್



ಗಳೊಂದಿಗೆ 125 ರನ್‌ಗಳಿಸಿ ಔಟ್ ಆದರು. ಜುರೆಲ್ಗೆ ಇದು ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಚೊಚ್ಚಲ ಶತಕವಾಗಿದೆ. ಜುರೆಲ್ ಬೆನ್ನಲ್ಲೇ ಜಡೇಜಾ ಕೂಡ ಶತಕ ಪೂರ್ಣಗೊಳಿಸಿದರು. 168 ಎಸೆತಗಳಲ್ಲಿ ಶತಕ ಪೂರೈಸಿದ ಜಡೇಜಾ ವೃತ್ತಿ ಜೀವನದ 6ನೇ ಶತಕ ದಾಖಲಿಸಿದ್ದಾರೆ.

ಜಡೇಜಾ 176 ಎಸೆತಗಳಲ್ಲಿ 6 ಬೌಂಡರಿ, 5 ಸಿಕ್ಸರ್‌ಗಳ ಸಹಿತ ಅಜೇಯ 104 ರನ್‌ಗಳಿಸಿದ್ದು 3ನೇ ದಿನಕ್ಕೆ ಬ್ಯಾಟಿಂಗ್ ಕಾಯ್ದಿರಿಸಿದ್ದಾರೆ. ವಾಷಿಂಗ್ಟನ್ ಸುಂದರ್ ಅಜೇಯ 9 ರನ್ ಗಳಿಸಿದ್ದರು.

ರೋಸ್ಟನ್ ಚೇಸ್ 90 ಕ್ಕೆ 2, ಖಾರಿ ಪಿಯರ್ 91 ಕ್ಕೆ 1, ಜೊಮೆಲ್ ವಾರಿಕನ್ 102 ಕ್ಕೆ 1, ಜೇಡನ್ ಸೀಲ್ಸ್ 53 ಕ್ಕೆ 1 ವಿಕೆಟ್ ಪಡೆದರು.

## ಅ.6ರಂದು ರಾಜ್ಯ ಹೊರ ಗುತ್ತಿಗೆ ನೌಕರರ ಮುಷ್ಕರ

• ಪ್ರಜೋದಯ ವರದಿ

**ಬೇಲೂರು:** ರಾಜ್ಯ ಹೊರ ಗುತ್ತಿಗೆ ನೌಕರರ ಸಂಘದ ವತಿಯಿಂದ ಅ.6 ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುತ್ತಿದೆ ಎಂದು ಸಂಘದ ಅಧ್ಯಕ್ಷ ಕೇಶವಮೂರ್ತಿ ಹೇಳಿದರು.

ರಾಜ್ಯದ ಮಹಾನಗರಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ಪೌರ ನೀರು ಸರಬರಾಜು ನೌಕರರ ಬೇಡಿಕೆಗಳನ್ನು ಸರ್ಕಾರ ಈಡೇರಿಸದ ಹಿನ್ನೆಲೆಯಲ್ಲಿ ಅ.6 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ನೀರು ಸರಬರಾಜು ಹೊರಗುತ್ತಿಗೆ ನೌಕರರ ಮಹಾಸಂಘದ ಅಧ್ಯಕ್ಷ ಕೇಶವಮೂರ್ತಿ ಹಾಗು ಪ್ರಧಾನ ಕಾರ್ಯದರ್ಶಿ ಮಂಜು




ನಾಥ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೌಕರರ ಬೇಡಿಕೆಗಳಲ್ಲಿ ನೇರ ನೇಮಕಾತಿ, ನೇರ ಪಾವತಿ ಮತ್ತು ಸೇವಾಭದ್ರತೆ ಪ್ರಮುಖವಾಗಿದ್ದು, ಹಲವು ವರ್ಷಗಳಿಂದ ಖಾಲಿ ಇರುವ ಹುದ್ದೆಗಳನ್ನು ಸರ್ಕಾರ ಇನ್ನೂ ಭರ್ತಿ ಮಾಡಿಲ್ಲ. ಸಾರ್ವಜನಿಕರ ಹಿತದೃಷ್ಟಿಯಿಂದ ಇದುವರೆಗೆ ಯಾವಾಗಲೂ ಮುಷ್ಕರ ಕೈಗೊಂಡಿರದ ನೌಕರರು, ಸರ್ಕಾರದ ವಿಳಂಬ ಧೋರಣೆಯಿಂದ ಬೇಸತ್ತು ಈ ಬಾರಿ ಹೋರಾಟಕ್ಕೆ ಇಳಿಯುತ್ತಿದ್ದೇವೆ ಎಂದರು.

ಸಮುದಾಯದ ನೀರಿನ ಪೂರೈಕೆ ಎಂಬ ಅತಿ ಮೂಲಭೂತ ಸೇವೆ ನಿರ್ವಹಿಸುತ್ತಿರುವ ನೌಕರರ ಬೇಡಿಕೆಗಳನ್ನು ತಕ್ಷಣವೇ ಸರ್ಕಾರ ಪರಿಗಣಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ ಎಂದರಲ್ಲದೆ, ಈಗಾಗಲೇ 60 ಸಾವಿರ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಂಡಿದ್ದಾರೆ. ಹಲವಾರು ಬಾರಿ ಹಿಂದಿನ ಸರ್ಕಾರಕ್ಕೆ ಮನವಿ ಮಾಡಿದ್ದೆವು. ಈಗಿರುವ ಪೌರಾಡಳಿತ ಸಚಿವರಲ್ಲಿ ಮನವಿ ಮಾಡಿದ್ದರು ಸಹ ಅದು ಮನವಿಗೆ ಸೀಮಿತವಾಗಿದೆ. ನಮ್ಮ ಕಷ್ಟಗಳಿಗೆ ಪರಿಹಾರ ಸಿಕ್ಕಿಲ್ಲ. ಇಡೀ ರಾಜ್ಯದಲ್ಲಿ ನಾವು ಕೇವಲ 6 ಸಾವಿರ ನೀರು ಸತಬರಾಜುದಾರರಿದ್ದು ಬೇಲೂರು ಪುರೆಭೆಯಲ್ಲಿ 29 ಹೊರಗುತ್ತಿಗೆ ನೀರು ಸರಬರಾಜುದಾರರು ಕೆಲಸ ನಿರ್ವಹಿಸುತ್ತಿದ್ದು ಸೌಜನ್ಯವಿಲ್ಲದ ಗುತ್ತಿಗೆದಾರರ ಬಳಿ ಕೆಲಸ ನಿರ್ವಹಿಸುತ್ತಿದ್ದೇವೆ. ಸುಮಾರು 2.5 ವರ್ಷಗಳಿಂದ ಗುತ್ತಿಗೆದಾರ ಪಿಎಫ್ ಹಾಗು ಪಿಎಸ್‌ಐಗಳನ್ನು ಕಟ್ಟಿಲ್ಲ. ನಮಗೆ ಏನೇ ತೊಂದರೆ ಯಾದರು ಅದಕ್ಕೆ ನಾವೆ ಜವಬ್ದಾರರು ಎಂದ ಅವರು, ಹಬ್ಬ ಹರಿದಿನ ಕೊರೊನ ಸಂದರ್ಭದಲ್ಲಿ ನಮ್ಮ ಜೀವದ ಹಂಗು ತೊರೆದು ನಾವು ಕೆಲಸ ಮಾಡಿದ್ದೇವೆ ಎಂದರು.

ಸಂಘಟನಾ ಕಾರ್ಯದರ್ಶಿ ಸುನೀಲ್ ನಿರ್ದೇಶಕ ಸರಸಿಂಹ ಹಾಗು ನರಸಿಂಹಸ್ವಾಮಿ ಇನ್ನಿತರರು ಹಾಜರಿದ್ದರು.

# ಪ್ರತಿಫಲ ಅಪೇಕ್ಷೆ ಇಲ್ಲದೆ ದುಡಿಯುವ ಮನಸ್ಸು ರೈತನದ್ದು

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನ ಕುಣಿಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಂಕರವಳ್ಳಿಯಲ್ಲಿ ಹಾಸನ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಹಾಗೂ ಸಹೋದರ ಬಳಗದ ವತಿಯಿಂದ ಚಿಂತನ ಮಂಥನ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ. ಲೋಕೇಶ ಮಾತನಾಡಿ, ಮಲೆನಾಡು ದಾರ್ಶನಿಕರನ್ನು ಕವಿಗಳನ್ನು ಸಮಾಜಸೇವಕರನ್ನು ಕಲಾವಿದರನ್ನು ಯಥೇಚ್ಛವಾಗಿ ಸೃಷ್ಟಿಸಿದೆ. ರೈತ ಚಳುವಳಿ ಈ ಭಾಗದಲ್ಲಿ ಪ್ರಾರಂಭವಾಗಿ ದೇಶದೆಲ್ಲೆಡೆ ಪಸರಿಸಿದೆ. ಕುವೆಂಪುರವರಂತಹ ಶ್ರೇಷ್ಠ ಸಾಹಿತಿಗಳು ಸೃಷ್ಟಿಯಾಗಿದ್ದು ಕೂಡ ಮಲೆನಾಡು ಭಾಗದಲ್ಲಿ. ನಿರ್ಮತ್ಸರದ ಸಮಾಜ ಸೇವಾ ಮನೋಭಾವನೆಯನ್ನು ಇಟ್ಟುಕೊಂಡು ಜೀವಿಸುತ್ತಿರುವ ಇಲ್ಲಿಯ ಜನರು ಸಮಾಜದ ಆಸ್ತಿಯಾಗಿದ್ದಾರೆ ಎಂದರು.

ಹಾಸನ ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ಜಯಣ್ಣ ಹೈದೂರ್ ಮಾತನಾಡುತ್ತಾ ಜೈ ಜವಾನ್ ಜೈ ಕಿಸಾನ್ ಎಂಬ ಮಾತಿನಂತೆ ರೈತ ಸಮೃದ್ಧವಾಗಿದ್ದರೆ ಇಡೀ ವಿಶ್ವ ಸಮೃದ್ಧವಾಗಿರುತ್ತದೆ. ಯಾವುದೇ ಪ್ರತಿಫಲ ಅಪೇಕ್ಷೆ



ಇಲ್ಲದೆ ದುಡಿಯುವ ಮನಸ್ಸು ಯಾವುದಾದರೂ ಇದೆ ಎಂದರೆ ಅದು ರೈತ ಮಾತ್ರ ಎಂದು ಅಭಿಪ್ರಾಯಪಟ್ಟರು.

ಯೋಗ ಗುರು ಹರೀಶ್ ಮಾತನಾಡಿ, ಯೋಗಿ ನಿರೋಗಿ. ಪ್ರತಿಯೊಬ್ಬ ವ್ಯಕ್ತಿಯ ಸುಖ ಸಮೃದ್ಧಿ ಮತ್ತು ಶಾಂತಿಕ್ತನಾಗಿ ಇರಬೇಕೆಂದಲ್ಲಿ ಯೋಗ ಧ್ಯಾನ ಬಹಳ ಮುಖ್ಯ. ದಣಿದ ಶರೀರ ಎಂದು ವ್ಯರ್ಥವಾಗದು ಸತ್ ಆಲೋಚನೆ ಸದಾಚಾರ ಸತ್ಕರ್ಮ ಉಪಾಸನೆ ಅಧ್ಯಯನ ಅಧ್ಯಾಪನ ಈ ವಿಚಾರಗಳು ಪ್ರತಿಯೊಬ್ಬ ವ್ಯಕ್ತಿಯಲ್ಲೂ ಅಡಕವಾಗಿರಬೇಕು ಎಂದು ತಿಳಿಸಿದರು.

ಇಡೀ ದೇಶದಲ್ಲಿಯೇ ಮಾದರಿ ಗ್ರಾಮ ಪಂಚಾಯಿತಿ ಎಂದು ಎನಿಸಿಕೊಂಡ ಕುಣಿಗನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಪ್ರಕಾಶ್ ಮಾತನಾಡುತ್ತಾ ಅಧಿಕಾರವಿಲ್ಲವೆಂದು ಕೊರಗುವ ಮಂದಿ ಅಧಿಕಾರ ಕೊಟ್ಟ ನಂತರ ತಾವು ಹೇಗೆ ನಡೆದುಕೊಳ್ಳುತ್ತಾರೆ ಎಂಬುದು ಬಹಳ ಮುಖ್ಯವಾಗುತ್ತದೆ. ಅಧಿಕಾರ ಸಿಕ್ಕ ನಂತರ ಏನಾದರೂ ಸಮಾಜ ಸೇವೆಯನ್ನು ಮಾಡುವುದು ಆ ವ್ಯಕ್ತಿಯ ಧರ್ಮವಾಗಿರುತ್ತದೆ ಇದನ್ನು ಅರಿತ ಯಾವುದೇ ರಾಜಕಾರಣಿ ಸಮಾಜ ಸುಧಾರಕನಾಗಿ ಹೊರಹೊಮ್ಮುತ್ತಾನೆ. ನಾನು ನನ್ನ ಗ್ರಾಮ ಪಂಚಾಯಿತಿಗೆ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳನ್ನು ಸುಧಾರಿಸುವುದರೊಂದಿಗೆ ಸಮಾಜ ಸೇವಕರ ಸಹಕಾರವನ್ನು ಪಡೆದು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡಿದೆನು. ಬಿಸಿ ಊಟದ ಸುಧಾರಣೆ ವಿದ್ಯಾರ್ಥಿಗಳಿಗೆ ಲೇಖನ ಸಾಮಗ್ರಿಗಳು ಬಟ್ಟೆ ಬ್ಯಾಗ್ ಕುಡಿಯುವ ನೀರಿನ ವ್ಯವಸ್ಥೆ, ಇನ್ನಿತರ ಸೌಲಭ್ಯಗಳನ್ನು ಒದಗಿಸಿ ಕೊಟ್ಟೆನು. ಪ್ರತಿ ಹಳ್ಳಿಯ ಮೂಲಭೂತ ಸೌಕರ್ಯಗಳು ಏನಿಲ್ಲ ಎಂಬುದನ್ನರಿತು ಆದಷ್ಟು ಎಲ್ಲವನ್ನು ಪೂರೈಸುವ ಕೈಂಕರ್ಯ ಮಾಡಿದ್ದೇನೆ ಎಂಬ ತೃಪ್ತಿ ನನಗಿದೆ ಎಂದರು.

ಶಿಕ್ಷಕ ವೆಂಕಟೇಶ್ ಮಾತನಾಡುತ್ತಾ ಮಲೆನಾಡಿನ ಶಿಕ್ಷಣ ವ್ಯವಸ್ಥೆ ಕ್ಲಿಷ್ಟಕರವಾಗಿದ್ದರೂ ಕೂಡ ಒಂದು ಗ್ರಾಮದಿಂದ ಒಂದು ಶಾಲೆಯನ್ನು ತಲುಪಲು ಸಾರಿಗೆ ವ್ಯವಸ್ಥೆಯ ಕಷ್ಟಕರ ಪರಿಸ್ಥಿತಿ ಇದ್ದರೂ ಕೂಡ ಶಾಲೆಯನ್ನು ತಲುಪಿ ವಿದ್ಯಾರ್ಥಿಗಳನ್ನು ಪ್ರತಿಭಾವಂತರನ್ನಾಗಿ ಮಾಡಲು ಈ ವ್ಯಾಪ್ತಿಯ ಶಿಕ್ಷಕರು ಕಂಕಣ ತೊಟ್ಟು ನಿಂತಿದ್ದಾರೆ. ಇದಕ್ಕೆ ಪೂರಕವಾಗಿ ಇಲ್ಲಿಯ ಪೋಷಕರು ಕೂಡ ಸಹಕರಿಸುತ್ತಿದ್ದಾರೆ. ವಿದ್ಯಾವಂತರು ಸಹೋದಯಗಳಾಗಿರಬೇಕೆಂಬುದು ನಿತ್ಯೋಕ್ತಿಯಾಗಿರುವಂತೆ ಇಲ್ಲಿ ಕಲಿತ ವಿದ್ಯಾರ್ಥಿಗಳು ಸಮಾಜದ ಆಸ್ತಿಗಳಾಗಿ ರೂಪಿತಗೊಂಡಿದ್ದಾರೆ ಎಂದರು.

ವಚನವಿಷಾರದ ಯೋಗಣ್ಣ ಮಾತನಾಡಿ, ವಚನಗಳು ನಮ್ಮ ಜೀವನದಲ್ಲಿ ಸಂತುಷ್ಟ ವಾತಾವರಣ ಸೃಷ್ಟಿಸಲು ಸಹಾಯಕವಾಗಿವೆ. ಶರಣ ಸಂಸ್ಕೃತಿಯಿಂದ ಉದ್ಭವವಾದ ವಚನಗಳು ಇಂದು ಮನೆಮಾತಾಗಿವೆ. ಜೀವನ ಶೈಲಿಯನ್ನು ಹೇಳಿಕೊಡುವ ವಚನಗಳು ಯಾರು ತಪ್ಪನ್ನು ಮಾಡದ ಹಾಗೆ ಎಚ್ಚರಿಸುತ್ತವೆ. ಮನಸ್ಸಿಗೆ ನೆಮ್ಮದಿ ಮತ್ತು ಮುದವನ್ನು ನೀಡುವ ವಚನಗಳನ್ನು ಭಗವದ್ಗೀತೆಗೆ ಸಮಾನವಾಗಿದೆ ಎಂದು ನುಡಿದರು.

ಸಮಾಜ ಸೇವಕ ರುದ್ರೇಶ್ ಮಾತನಾಡಿ, ಪ್ರಕೃತಿ ಹೇಗಿದ್ದರೂ ತಮ್ಮ ಕಾಯಕವನ್ನು ತಾವು ಮಾಡಿಕೊಂಡು ಹೋಗುತ್ತಾರೆ. ನೆಮ್ಮದಿಯಿಂದ ಜೀವನವನ್ನು ನಿರ್ವಹಿಸುತ್ತಿ ದ್ದಾರೆ. ಈ ವ್ಯಾಪ್ತಿಯ ರೈತರಿಗೆ ಹಲವಾರು ಸವಾಲುಗಳಿವೆ ಪ್ರತಿನಿತ್ಯ ನೂರಾರು ಸವಾಲುಗಳು ಎದುರಾಗುತ್ತಿರುತ್ತವೆ. ಈ ಎಲ್ಲಾ ಸವಾಲುಗಳನ್ನು ಸ್ವಯಂಕೃತ ಪರಿಹರಿಸಿಕೊಂಡು ಕೃಷಿ ಕಾಯಕದಲ್ಲಿ ತೊಡಗಿದ್ದಾರೆ ಮರಗಿಡಗಳನ್ನು ಕಡಿದು ಕಾಡಿನಲ್ಲಿದ್ದ ಪ್ರಾಣಿಗಳು ನಾಡಿಗೆ ಬರಲು ಕಾರಣ ಕರ್ತರಾಗದೆ ಕಾಡನ್ನು ಬೆಳೆಸಿ ಪ್ರಾಣಿ ಪಕ್ಷಿ ಸಂಕುಲವನ್ನು ಕಾಪಾಡುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಕಾರ್ಯಕ್ರಮದಲ್ಲಿ ಸತ್ಯನಾರಾಯಣ ಹರೇಹಳ್ಳಿ ಚುಟುಕು ಸಾಹಿತಿ ಅನಿಲ್ ಕುಮಾರ್ ಯುವ ರೈತ ಚರಣ್, ಪ್ರಗತಿಪರ ರೈತ ಶಾಂತರಾಜು, ಹರೀಶ್, ಚರಣ್, ಅರ್ಜುನ್ , ನಂಜೇಗೌಡ, ಜಗ ಮಗ್ಗೆ ಉಪಸ್ಥಿತರಿದ್ದರು.

## ಇಂದು ಜನ ಜನಸ್ಪಂದನ ಕಾರ್ಯಕ್ರಮ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕು ವ್ಯಾಪ್ತಿಯಲ್ಲಿ ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶದಲ್ಲಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದ್ದು ಸಾರ್ವಜನಿಕರು, ಎಲ್ಲಾ ರೈತಾಪಿ ವರ್ಗದವರಿಗೆ ಸಾರ್ವಜನಿಕ ಹಾಗೂ ಜನತೆಗೆ ಸಾಮಾಜಿಕ ಶೈಕ್ಷಣಿಕ ಹಾಗೂ ಕೃಷಿ ಚಟುವಟಿಕೆಗಳಿಗೆ ವಿವಿಧ ಇಲಾಖೆಗಳಲ್ಲಿ ದೊರೆಯಬೇಕಾದ ಸೌಲಭ್ಯಗಳು ನಿಗಧಿತ ಅವಧಿಯೊಳಗೆ ದೊರೆಯದೇ ಇದ್ದಾಗ ಖುದ್ದು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸಲು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಒಂದೆಡೆ ಇರುವುದರಿಂದ ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ನೇರವಾಗಿ ತಮ್ಮ ಅಹವಾಲನ್ನು ದಾಖಲಿಸಲು ತಾಲ್ಲೂಕು ಮಟ್ಟದಲ್ಲಿ ಅ.4 ರಂದು ಬೆಳಿಗ್ಗೆ 10 ಗಂಟೆಗೆ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಜನಸ್ಪಂದನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಹಸೀಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪರಮಪೂಜ್ಯ ಶ್ರೀ ಸಂಗಮೇಶ್ವರ ಮಹಾಸ್ವಾಮಿಗಳು**

**ಮಠಾಧ್ಯಕ್ಷರು, ಶ್ರೀ ಜವೇನಹಳ್ಳಿ ಮಠ, ಹಾಸನ** - 573 201

ಹೆತ್ತೂರು ಅಗಚಿಗದ್ದೆ ಹಾಲು ಒಡೆಯರ ಮಠ, ಸಕಲೇಶಪುರ (ತಾ॥)

**ಪ್ರಕಟಣೆ**

ಹಾಸನ ನಗರದ ಶ್ರೀ ಜವೇನಹಳ್ಳಿ ಮಠದ ಗ್ರಾಮದ ಸರ್ವೆ ನಂಬರ್ 34ರ ಪೈಕಿ ಸೈಟು ನಂ.26 ರ ದಾಖಲೆಗಳನ್ನು ಕೆಲವರು ಫೋರ್ಜರಿ ಮಾಡಿ ತಮ್ಮ ಹೆಸರಿಗೆ ಮಾಡಿಸಿ ಕೊಂಡು ಮಾರುತ್ತಿರುವ ವಿಷಯ ನಮ್ಮ ಗಮನಕ್ಕೆ ಬಂದಿದ್ದು ಸದರಿ ಸರ್ವೆ ನಂ.34 ಸೈಟ್ ನಂ. 26 ಸೈಟನ್ನು ಸಾರ್ವಜನಿಕರು ತೆಗೆದುಕೊಳ್ಳಬಾರದು. ಸದರಿ ಸೈಟು ಶ್ರೀ ಮಠಕ್ಕೆ ಸೇರಿದ್ದಾಗಿರುತ್ತದೆ. ಈ ಮೂಲಕ ತಿಳಿಯಪಡಿಸುತ್ತೇವೆ.

ಶ್ರೀ ಸಂಗಮೇಶ್ವರ ದೇವರು

ದಿನಾಂಕ: 03-10-2025



# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025



## ಸಾಮಾಜಿಕ ನ್ಯಾಯದ ಅನುಷ್ಠಾನದತ್ತ ಹೊಸ ಆರಂಭ




## ರಾಜ್ಯದ 2 ಕೋಟಿ ಕುಟುಂಬಗಳ ಸುಮಾರು 7 ಕೋಟಿ ಜನರ ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ವೈಜ್ಞಾನಿಕ ಅಧ್ಯಯನ

**1.75 ಲಕ್ಷ ಶಿಕ್ಷಕರ** ಮೂಲಕ ಸಮೀಕ್ಷೆ ಕಾರ್ಯ, ಸಮೀಕ್ಷೆಗಾಗಿ **ರೂ.420 ಕೋಟಿ** ನಿಗದಿ

ಸಮೀಕ್ಷೆ ಆರಂಭಕ್ಕೆ ಪೂರ್ವದಲ್ಲಿ ಆಶಾ ಕಾರ್ಯಕರ್ತೆಯರಿಂದ ಪ್ರತಿ ಮನೆಗೆ ಸಮೀಕ್ಷಾ ಸಮೂನೆ ಹಂಚಿಕೆ ಮಾಡಲಾಗುವುದು

ಪ್ರತಿ ಮನೆಯ ವಿದ್ಯುತ್ ಮೀಟರ್ ಆಧಾರದಲ್ಲಿ ಮನೆಯ **ಜಿಯೋ ಟ್ಯಾಗ್** ಮಾಡಿ ಯು.ಹೆಚ್.ಐ.ಡಿ ವಿಶೇಷ ಸಂಖ್ಯೆ ನಮೂದಿಸಲಾಗುವುದು.



**60 ಪ್ರಶ್ನೆಗಳ** ಮೂಲಕ ವಸ್ತುನಿಷ್ಠ ದತ್ತಾಂಶ ಸಂಗ್ರಹ ಮಾಡಲಾಗುವುದು

ಪಡಿತರ ಚೀಟಿ ಹಾಗೂ ಆಧಾರ್ ಕಾರ್ಡ್ ಅನ್ನು ಮೊಬೈಲ್ ಸಂಖ್ಯೆಯೊಂದಿಗೆ ಜೋಡಣೆ ಮಾಡಲಾಗುವುದು

ಸಮೀಕ್ಷೆಗೆ ಸಂಬಂಧಿಸಿದ ದೂರು ದಾಖಲು ಮಾಡಲು ಅಥವಾ ಮಾಹಿತಿ ಪಡೆಯಲು ಆಯೋಗದ ಸಹಾಯವಾಣಿ **80507 70004**ಗೆ ಕರೆಮಾಡಿ

ಆನ್ ಲೈನ್ ಮೂಲಕವೂ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ

**ಸಮೀಕ್ಷೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಂಡು, ವಾಸ್ತವ ಹಾಗೂ ಸಮರ್ಪಕವಾದ ಮಾಹಿತಿಯನ್ನು ಒದಗಿಸಿ, ಸಮೀಕ್ಷೆಯನ್ನು ಯಶಸ್ವಿಗೊಳಿಸಿಕೊಡಬೇಕೆಂದು ಕೋರುತ್ತೇವೆ.**

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

# ಕೇಂದ್ರದಿಂದ ಮತ್ತೆ ರಾಜ್ಯಕ್ಕೆ ತೆರಿಗೆ ಅನ್ಯಾಯ

## ಅಗತ್ಯಬಿದ್ದರೆ ನ್ಯಾಯಾಲಯದ ಮೊರೆ: ಮುಖ್ಯಮಂತ್ರಿ ಸಿದ್ದರಾಮಯ್ಯ

• ಪ್ರಜೋದಯ ವರದಿ

**ಮೈಸೂರು:** ತೆರಿಗೆ ಪಾಲು ಹಂಚಿಕೆಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮತ್ತೆ ಅನ್ಯಾಯವಾಗಿದೆ. ಹೀಗಾಗಿ, ಕಳೆದ ಬಾರಿಯಂತೆ ಈ ಸಲವೂ ಅಗತ್ಯಬಿದ್ದರೆ ನ್ಯಾಯಾಲಯದ ನೆರವಿನಲ್ಲಿ ನಮ್ಮ ಅನುದಾನ ಪಡೆದುಕೊಳ್ಳುತ್ತೇವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ಸಾಕಷ್ಟು ಅನುದಾನ ಖೋತಾ ಆಗಿದೆ. ಉತ್ತರಪ್ರದೇಶಕ್ಕೆ ಶೇ.18ರಷ್ಟು ನೀಡುತ್ತಿದ್ದು, ರಾಜ್ಯಕ್ಕೆ ಕೇವಲ ಶೇ.3.5ರಷ್ಟು ಕೊಟ್ಟಿರುವುದು ಅನ್ಯಾಯ. ಕರ್ನಾಟಕ 4.5 ಲಕ್ಷ ಕೋಟಿಯನ್ನು ತೆರಿಗೆ ರೂಪದಲ್ಲಿ ಕೇಂದ್ರಕ್ಕೆ ನೀಡಿದರೆ, ನಮಗೆ ರೂಪಾಯಿಗೆ 14 ಪೈಸೆ ಮಾತ್ರ ಸಿಗುತ್ತಿದೆ ಎಂದು ದೂರಿದರು.

15ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ನೀಡಲಾಗಿದ್ದ ವಿಶೇಷ ಅನುದಾನವನ್ನು ಕೇಂದ್ರ ವಿತ್ತ ಸಚಿವರು ರದ್ದುಪಡಿಸಿದರು. ಆಯೋಗದ ಶಿಫಾರಸ್ಸಿನಂತೆ 5,490 ಕೋಟಿ ಹಾಗು ಕೆರೆಗಳ ಅಭಿವೃದ್ಧಿಗೆ 3ಸಾವಿರ ಕೋಟಿ, ರಸ್ತೆ ನಿರ್ಮಾಣಕ್ಕೆ 3ಸಾವಿರ ಕೋಟಿ, ಭದ್ರಾ ಮೇಲ್ದಂಡೆ ಯೋಜನೆಗೆ 5ಸಾವಿರ ಕೋಟಿಯನ್ನು ನಮಗೆ ಕೊಟ್ಟೇ ಇಲ್ಲ. ನಮಗೆ ಬರಬೇಕಾದ 17 ಸಾವಿರ ಕೋಟಿ ಖೋತಾ ಆಗಿದೆ ಎಂದು ತಿಳಿಸಿದರು.

**ಬೆನ್ನು ತಟ್ಟಿಕೊಳ್ಳುತ್ತಿರುವ ಕೇಂದ್ರ**

ಜಿಎಸ್‌ಟಿ ಉತ್ಸವ ಆಚರಿಸುವಂತೆ ಕೇಂದ್ರ ಸರ್ಕಾರ ತಿಳಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, 2017ರಲ್ಲಿ ಕೇಂದ್ರ ಸರ್ಕಾರವೇ ಜಿಎಸ್‌ಟಿ ಜಾರಿಗೆ ತಂದು ದರ ನಿಗದಿಪಡಿಸಿತ್ತು. ಕಳೆದ 8 ವರ್ಷಗಳಿಂದ ಹೆಚ್ಚಿನ ತೆರಿಗೆ ಪಡೆದಿರುವ ಕೇಂದ್ರ, ಆ ಹಣವನ್ನು ಮರಳಿಸುವುದೇ? ತಾನೇ ಹೆಚ್ಚಿಸಿದ ಜಿಎಸ್‌ಟಿ ದರವನ್ನು ಈಗ ಕಡಿಮೆ ಮಾಡಿ ಬೆನ್ನು ತಟ್ಟಿಕೊಳ್ಳುತ್ತಿದೆ ಎಂದು ಟೀಕಿಸಿದ ಅವರು, ಕೇಂದ್ರ ನೀಡುತ್ತಿರುವ ಕಡಿಮೆ ಅನುದಾನದ ನಡುವೆ ಗ್ಯಾರಂಟಿ ಯೋಜನೆ ಗಳ ವೆಚ್ಚ ಭರಿಸುವುದು ಸರ್ಕಾರಕ್ಕೆ ಸವಾಲಾಗಿದ್ದರೂ, ಅದನ್ನು ದಿಟ್ಟತನದಿಂದ ಎದುರಿಸಲಾ ಗುವುದು. ಜಿಎಸ್‌ಟಿ ಸರಳೀಕರಣದಿಂದ ರಾಜ್ಯ ಸರ್ಕಾರಗಳು ಹೆಚ್ಚು ನಷ್ಟ ಎದುರಿಸಲಿವೆ. ಆದರೆ, ಕರ್ನಾಟಕದ ಬಿಜೆಪಿ ಸಂಸದರಿಗೆ ನರೇಂದ್ರ ಮೋದಿ ಅವರನ್ನು ಹೊಗಳುವುದೇ ಕೆಲಸ ವಾಗಿದ್ದು, ನಾಡಿನ ಹಿತಚಿಂತನೆ ಮಾಡುತ್ತಿಲ್ಲ ಎಂದು ದೂರಿದರು.

**ಅಶೋಕ್‌ಗೆ ಏನ್ ಗೊತ್ತು**

ರೈತರ ಸಮಸ್ಯೆ ಬಗೆಹರಿಸದಿದ್ದರೆ ಸರ್ಕಾರ ಇದ್ದರೂ ಸತ್ತಂತೆಯೇ ಎಂಬ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹೇಳಿಕೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಅವರು ಆರ್‌ಎಸ್‌ಎಸ್‌ಆರ್ ನಿರ್ದೇಶನದಂತೆ ಮಾತನಾಡುತ್ತಾರೆ. ರಾಜಕಾರಣಕ್ಕಾಗಿ ಆರೋಪ ಮಾಡುತ್ತಿದ್ದಾರೆ. ಅವನಿಗೆ ನಾಡಿನ, ರೈತನ ಸಮಸ್ಯೆ ಏನು ಗೊತ್ತು ಎಂದು ಕೇಳಿದರು.

ಮತಾಂತರಕ್ಕಾಗಿ ಹಾಗೂ ಜಾತಿ ಒಡೆಯುವ ದೃಷ್ಟಿಯಿಂದ ರಾಜ್ಯ ಸರ್ಕಾರ ಸಮೀಕ್ಷೆ ನಡೆಸುತ್ತಿದೆ ಎಂಬ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿಕೆಗೆ ಪ್ರತಿಕ್ರಿಯಿಸಿ, ಕೇಂದ್ರ ನಡೆಸಲಿರುವ ಜಾತಿ ಸಮೀಕ್ಷೆಯ ಉದ್ದೇಶವನ್ನು ತಿಳಿಸಲಿ. ಅವರಿಗೂ ಜಾತಿ, ಧರ್ಮ ಒಡೆಯುವ ಉದ್ದೇಶವಿದೆಯೇ. ಕರ್ನಾಟಕದಲ್ಲಿ ಆರ್ಥಿಕ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಯುತ್ತಿದ್ದು, ಜನರ ಸ್ಥಿತಿಗತಿ ಬಗ್ಗೆ ಮಾಹಿತಿ ಪಡೆಯುವುದು ನಮ್ಮ ಉದ್ದೇಶವಾಗಿದೆ. ನಮಗೆ ಜಾತಿ ಒಡೆಯುವ ಉದ್ದೇಶವಿಲ್ಲ. ಜನರು ಸ್ವಯಂ ಪ್ರೇರಿತರಾಗಿ ಜಾತಿ ನಮೂದಿಸಿದರೆ ಅದಕ್ಕೆ ಸರ್ಕಾರ ಜವಾಬ್ದಾರಿಯಲ್ಲ. ಜನರ ದಾರಿ ತಪ್ಪಿಸುವ ಕೆಲಸವನ್ನು ಬಿಜೆಪಿ ಮಾಡುತ್ತಿದೆಂದು ದೂರಿದರು.

**ಪ್ರಗತಿ ಗಮನಿಸಿ ಮುಂದಿನ ನಿರ್ಧಾರ**

ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ಅ.7ರೊಳಗೆ ಪೂರ್ಣಗೊಳಿಸುವ ಭರವಸೆ ಇದೆ. ಈಗಾಗಲೇ 80 ಲಕ್ಷ ಮನೆಗಳಿಂದ 3 ಕೋಟಿ ಜನರ ಸಮೀಕ್ಷೆ ಪೂರ್ಣಗೊಂಡಿದೆ. 1.80 ಕೋಟಿ ಕುಟುಂಬಗಳ ಸಮೀಕ್ಷೆ ನಡೆಯಬೇಕಿದೆ. ಪ್ರಗತಿಯನ್ನು ಗಮನಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು. ಅಗತ್ಯಬಿದ್ದರೆ ದಿನಾಂಕ ವಿಸ್ತರಿಸಲಾಗುವುದೆಂದು ಪ್ರತಿಕ್ರಿಯಿಸಿದರು.



**ಡಿಸೆಂಬರ್‌ನಲ್ಲಿ ಹೊಸ ಮನೆ ಪ್ರವೇಶ**

ಮೈಸೂರಿನಲ್ಲಿ ನಿರ್ಮಿಸಿರುವ ಹೊಸ ಮನೆಯ ಪ್ರವೇಶ ಡಿಸೆಂಬರ್‌ಗೆ ಮಾಡುತ್ತೇನೆ. ಯಾರನ್ನೂ ಆಹ್ವಾನಿಸುವುದಿಲ್ಲ. ಕುಟುಂಬದವರು ಮಾತ್ರ ಸೇರಿ ಕಾರ್ಯಕ್ರಮ ಮಾಡುತ್ತೇವೆ. ಮನೆಯ ಕೆಲಸ ಬಹುತೇಕ ಮುಕ್ತಾಯವಾಗಿದೆ. ಮೈಸೂರಿನಲ್ಲಿ ನಾನಿರುವ ಮನೆ ನನ್ನದಲ್ಲ, ಮರಿಸ್ವಾಮಿ ಅವರದ್ದು. ಆತನೇ ನನಗೆ ಹಾಗು ನನ್ನ ಮಗನಿಗೆ ಅನ್ನದಾತ. ಗೃಹ ಪ್ರವೇಶ ಆದ ಮೇಲೆ ಹೊಸ ಮನೆಗೆ ಹೋಗುತ್ತೇನೆ. ಈ ಮನೆಯನ್ನು ಮರಿಸ್ವಾಮಿ ಖಾಲಿ ಇಟ್ಟರೆ ಜನರ ಭೇಟಿಗೆ ಇದನ್ನೇ ಬಳಸಿಕೊಳ್ಳುತ್ತೇನೆಂದು ಹೇಳಿದರು.

# ಎಲ್ಲಾ ಚುನಾವಣೆಯಲ್ಲೂ ಮೈತ್ರಿ ಮುಂದುವರಿಕೆ

» ಮೊದಲನೇ ಪುಟದಿಂದ

**ಪಕ್ಷ ಸಂಘಟನೆ ಶ್ರಮ**

ಪಕ್ಷ ಸಂಘಟನೆಗೆ ನಾನು ಶ್ರಮ ಹಾಕುತ್ತೇನೆ. ಹಿಂದಿನಂತೆ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರ ಸ್ವಾಮಿ ಅವರು ಸಕ್ರಿಯವಾಗಿ ಕೆಲಸ ಮಾಡಲಿದ್ದಾರೆ. ಅವರ ಆರೋಗ್ಯ ಉತ್ತಮವಾಗಿದೆ. ನಿಖಿಲ್ ಕುಮಾರ ಸ್ವಾಮಿ ಅವರು ಪಕ್ಷ ಸಂಘಟನೆಯನ್ನು ಮಾಡುತ್ತಿದ್ದಾರೆ. ಮೂರು ಸಲ ಅವರು ಚುನಾವಣೆಯಲ್ಲಿ ಸೋತರೂ ಮನೆಯಲ್ಲಿ ಕೂರದೆ ಸಂಘಟನೆ ಕೆಲಸದಲ್ಲಿ ನಿರತರಾಗಿ ದ್ದಾರೆ. ಸೋಲಿನ ಅನುಭವದಿಂದ ಪಾಠ ಕಲಿತು ರಾಜ್ಯ ಪ್ರವಾಸ ಮಾಡುತ್ತಿರುವ ಅವರು, ಅನುಭವಿ ರಾಜಕಾರಣಿಯಂತೆ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಿಖಿಲ್ ಕುಮಾರಸ್ವಾಮಿ ಅವರು ರಾಜ್ಯ ವ್ಯಾಪಿ ನಡೆಸುತ್ತಿರುವ ಸದಸ್ಯ ಅಭಿಯಾನ ಮತ್ತು ಸಂಘಟನಾ ಪ್ರವಾಸ ಯಶಸ್ವಿಯಾಗಿದೆ. ಬೆಂಗಳೂರು ನಗರದಲ್ಲಿ ಪಕ್ಷವನ್ನು ಗಟ್ಟಿಯಾಗಿ ಕಟ್ಟು ತ್ತೇವೆ. ಈ ನಿಟ್ಟಿನಲ್ಲಿ ಅಕ್ಟೋಬರ್ 12ರಂದು ಜೆಡಿಎಸ್ ಮಹಿಳಾ ಸಮಾವೇಶವನ್ನು ಆಯೋಜಿಸಲಾಗುವುದು. ಕನಿಷ್ಠ 50,000–60,000 ಮಹಿಳೆಯರು ಭಾಗವಹಿಸಲಿದ್ದಾರೆ. ತಳಮಟ್ಟದಿಂದ ಪಕ್ಷವನ್ನು ಸಂಘಟಿಸಲಾಗು ವುದೆಂದ ಅವರು, ಚುನಾವಣೆ ಬಂದಾಗ ನಮ್ಮ ಶಕ್ತಿ ಎಷ್ಟಿದೆ ಎಂಬುದು ಎಲ್ಲರಿಗೂ ತಿಳಿಯಲಿದೆ ಎಂದು ಮಾರ್ಮಿಕವಾಗಿ ನುಡಿದರು. ಮುಂಬರುವ ಜಿಬಿಎ ಚುನಾವಣೆಯಲ್ಲಿ ಕನಿಷ್ಠ 50–60 ಸ್ಥಾನಗಳನ್ನು ಗೆಲ್ಲುವ ಗುರಿಯನ್ನು ಜೆಡಿಎಸ್ ಹೊಂದಿದೆ. ಹೀಗಾಗಿ ನಗರದಲ್ಲಿ ಪಕ್ಷವನ್ನು ಸಂಘಟನೆ ಮಾಡುತ್ತಿರುವುದಾಗಿ ಅವರು ತಿಳಿಸಿದರು.



**ಸಕಲೇಶಪುರ ತಾಲ್ಲೂಕಿನ ಆನೆಮಹಲ್ ಪಂಚಾಯತಿ ವ್ಯಾಪ್ತಿಯ ಮಂಜರಾಬಾದ್ ಕೋಟೆ ಬಳಿ ಪ್ರವಾಸಿಗರಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಮತ್ತು ಮೂಲಭೂತ ಸೌಕರ್ಯಗಳ ಕುರಿತಾಗಿ ಸ್ಥಳಕ್ಕೆ ಶಾಸಕ ಸಿಮೆಂಟ್ ಮಂಜು ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.**

# ಸಾಮೂಹಿಕ ಅಗ್ನಿಹೋತ್ರ ಕಾರ್ಯಾಗಾರ

• ಪ್ರಜೋದಯ ವರದಿ

**ಹಾಸನ:** ನಗರದ ಶ್ರೀ ಕನ್ನಿಕಾ ಪರಮೇಶ್ವರಿ ದೇವಾಲಯ ಆವರಣದಲ್ಲಿ ಪತಂಜಲಿ ಯೋಗ ಸಮಿತಿ, ವೇದ ಭಾರತೀ ವತಿಯಿಂದ ಅ.5ರ ಭಾನುವಾರ ಲೋಕ ಕಲ್ಯಾಣಕ್ಕಾಗಿ ಸಾಮೂಹಿಕ ಅಗ್ನಿಹೋತ್ರ ಮತ್ತು ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ವೇದ ಭಾರತೀ ರಾಜ್ಯ ಸಂಯೋಜಕ ಹರಿಹರಪುರ ಶ್ರೀಧರ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಅಂದು ಬೆಳಿಗ್ಗೆ 9 ಗಂಟೆಗೆ ಎಲ್ಲರಿಗಾಗಿ ಯೋಗ, ಎಲ್ಲರಿಗಾಗಿ ಯಜ್ಞ, ಎಲ್ಲರಿಗೂ ಆರೋಗ್ಯ ಎಂಬ ಧ್ಯೇಯದೊಂದಿಗೆ ಕಾರ್ಯಕ್ರಮ ರೂಪಿಸಲಾಗಿದೆಯೆಂದರು.

ಅಗ್ನಿಹೋತ್ರವು ಪುರಾತನ ಯಜ್ಞ ವಿಧಾನವಾಗಿದ್ದು, ವಾತಾವರಣ ಶುದ್ಧೀಕರಣ, ಮಾನಸಿಕ ಶಾಂತಿ, ದೈಹಿಕ ಆರೋಗ್ಯ ಹಾಗು ಸಾಮಾಜಿಕ ಏಕತೆಗಾಗಿ ಬಹುಮುಖ್ಯವಾಗಿದೆ. ಸಾಮೂಹಿಕ ಅಗ್ನಿಹೋತ್ರದ ಮೂಲಕ ಸಮಾಜದ ಶ್ರೇಯೋಭಿವೃದ್ಧಿಗೆ ಪೂರಕ ವಾತಾವರಣ ಸೃಷ್ಟಿಯಾಗು ತ್ತದೆಂದರು.

ರಾಜ್ಯ ಪ್ರಭಾರಿ ವರಿಷ್ಠ ಭವರಲಾಲ್ ಆರ್ಯ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿ ದ್ದಾರೆ. ಹಾಸನ ಆರ್ಯ ವೈಶ್ಯ ಮಂಡಳಿ ಅಧ್ಯಕ್ಷ ಬಿ.ಹೆಚ್. ವಿಶ್ವನಾಥ ಶ್ರೇಷ್ಠಿ ಅಧ್ಯಕ್ಷತೆ ವಹಿಸಲಿದ್ದಾರೆ. ಅಗ್ನಿಹೋತ್ರದಲ್ಲಿ ಭಾಗವಹಿಸುವವರಿಗೆ ವಸ್ತ್ರ ಸಂಹಿತೆ ಇದೆ. ಪುರುಷರು ಬಿಳಿ ಪಂಚೆ–ಶಲ್ಯ ಹಾಗು ಮಹಿಳೆಯರು ಹಳದಿ ಸೀರೆ, ಕೆಂಪು ರವಿಕೆ ಧರಿಸಬೇಕೆಂದು ಸೂಚಿಸಲಾಗಿದೆ. ಅಗತ್ಯವಿದ್ದರೆ ಭಾರತೀಯ ಸಾಂಪ್ರದಾಯಿಕ ಉಡುಗೆ ಧರಿಸಬಹುದು. ಅಗ್ನಿಹೋತ್ರ ನಡೆಸಲು ಅಗತ್ಯವಿರುವ 650 ರೂ. ಮೌಲ್ಯದ ಸೆಟ್ ಅನ್ನು ವಿಶೇಷ ರಿಯಾಯಿತಿ ದರದಲ್ಲಿ 500ರೂ.ಗೆ ಕಾರ್ಯಕ್ರಮದ ಸ್ಥಳದಲ್ಲೇ ಪಡೆಯುವಂತೆ ವ್ಯವಸ್ಥೆ ಮಾಡಲಾಗಿದೆ. ಭಾಗವಹಿಸುವವರು ಬೆಳಿಗ್ಗೆ 8 ಗಂಟೆಯೊಳಗೆ ಸ್ಥಳಕ್ಕೆ ಆಗಮಿಸುವಂತೆ ಮನವಿ ಮಾಡಿದರು. ಮಾಹಿತಿಗೆ ಮೊ.ನಂ. 7892940096 ಇಲ್ಲಿಗೆ ಸಂಪರ್ಕಿಸಬಹುದು ಎಂದರು.




ಪತಂಜಲಿ ಯೋಗ ಪರಿವಾರ ಜಿಲ್ಲಾ ಸಂರಕ್ಷಕ ಲೋಕನಾಥ್, ಮಹಿಳಾ ಜಿಲ್ಲಾ ಪ್ರಭಾರಿ ಶಾರದ ಧರ್ಮಾನಂದ್, ಹೇಮಂತ್ ಕುಮಾರ್, ಯೋಗಪಟು ನಾಗರಾಜು ಇದ್ದರು.


# ಸಾಹಿತ್ಯ ಕೆಲಸ ಬಿಟ್ಟು ಬೇರೆ ಯಾವುದು ಮುಖ್ಯವಲ್ಲ: ದೀಪಾ ಭಾಸ್ತಿ

• ಪ್ರಜೋದಯ ವರದಿ

**ಅರಕಲಗೂಡು:** ಕನ್ನಡ ಸಾಹಿತ್ಯದಲ್ಲಿ ಇದುವರೆಗೆ ಮಾಡಿರುವ ಹಾಗು ಮಾಡಬೇಕಿರುವ ಕೆಲಸಗಳಷ್ಟೇ ನನಗೆ ಮುಖ್ಯ. ಸಾಹಿತ್ಯದಲ್ಲಿ ಮುಂದೇನಾಗಬೇಕೆಂಬುದರ ಕುರಿತು ಮಾತ್ರ ಯೋಚಿಸುತ್ತೇನೆಂದು ಅಂತರ ರಾಷ್ಟ್ರೀಯ ಬೂಕರ್ ಪುರಸ್ಕೃತ ಅನು ವಾದಕಿ ದೀಪಾ ಭಾಸ್ತಿ ಅವರು ಹೇಳಿದರು.

ತಾಲ್ಲೂಕು ಆಡಳಿತದಿಂದ ಗುರುವಾರ ರಾತ್ರಿ ಏರ್ಪಡಿಸಿದ್ದ ದಸರಾ ಸಮಾರಂಭಕ್ಕೂ ಮೊದಲು ಸುದ್ದಿಗಾರರೊಂದಿಗೆ ಮಾತನಾಡಿ, ಕನ್ನಡ ಸಾಹಿತ್ಯಕ್ಕೆ 1,500 ವರ್ಷಗಳ ಇತಿಹಾಸವಿದೆ. ನಮ್ಮ ನಂತರವೂ ಕನ್ನಡ ಉಳಿಯುತ್ತದೆ. ಬೂಕರ್ ಪ್ರಶಸ್ತಿ ಬಂದಿರುವುದು ನಮ್ಮ ರಾಜ್ಯ, ದೇಶಕ್ಕೆ ಹೆಮ್ಮೆಯ ವಿಷಯ. ವೈಯಕ್ತಿಕವಾಗಿಯೂ ಖುಷಿ ತಂದಿರುವ ವಿಚಾರವೆಂದರು.

ಲೇಖಕರು ಹಾಗು ಅನುವಾದಕರಲ್ಲಿ ಯಾರೂ ಮುಖ್ಯರಲ್ಲ, ಯಾರೂ ಅಮುಖ್ಯರಲ್ಲ. ಪ್ರಶಸ್ತಿಗೆ ಕೃತಿಯನ್ನು ಆಯ್ಕೆ ಮಾಡುವ ಮಂಡಳಿಯು ತಾರತಮ್ಯ ಮಾಡದೆ ಪ್ರಶಸ್ತಿ ಹಣವನ್ನು ಸಮಾನವಾಗಿ ಹಂಚಿಕೆ ಮಾಡುತ್ತದೆ. ಮೈಸೂರು ದಸರಾ ಉದ್ಘಾಟನೆಗೆ ನನ್ನನ್ನು ಆಹ್ವಾನಿಸಿಲ್ಲ ವೆಂಬ ಆರೋಪಗಳಿಗೆ ಪ್ರತಿಕ್ರಿಯಿಸುವುದಿಲ್ಲ. ರಾಜ್ಯ ಸರ್ಕಾರದ ನಿರ್ಧಾರ ಪ್ರಶ್ನಿಸುವುದಿಲ್ಲ ವೆಂದರು.



ಬಾನು ಮುಷ್ತಾಕ್ ಅವರಿಂದ ದಸರಾ ಉದ್ಘಾಟನೆಗೆ ವಿರೋಧ ವಿಚಾರವಾಗಿ ಬೇರೆ ದೃಷ್ಟಿ ಯಲ್ಲಿ ಚರ್ಚೆ ಮಾಡುವ ಆಸಕ್ತಿ ನನಗೆ ಯಾವತ್ತೂ ಇಲ್ಲ, ಅಂತಹ ವಿಷಯಕ್ಕೆ ನಾನು ಬರುವುದಿಲ್ಲ. ಸಾಹಿತ್ಯದಲ್ಲಿ ಮಾಡಿರುವ ಹಾಗು ಮಾಡಬೇಕಿರುವ ಕೆಲಸ ನನಗೆ ಮುಖ್ಯವೆಂದರು.

ನಮ್ಮಿಂದ ಕನ್ನಡ ಅಲ್ಲ, ನಾವಿರುವುದು ಕನ್ನಡಕ್ಕೋಸ್ಕರ. ನಾನು ಕೆಲಸ ಮಾಡುವುದು ಕನ್ನಡಕ್ಕೋಸ್ಕರ. ನನಗೆ ಅದರ ಮೇಲೆ ಜಾಸ್ತಿ ಗಮನ ಸೆಳೆಯಲು ನನ್ನ ಶ್ರಮ, ಶಕ್ತಿ ಅದಕ್ಕೆ ಮೀಸಲಿಡುತ್ತೇನೆ. ವೈಯಕ್ತಿಕ ಟೀಕೆಗಳ ಬಗ್ಗೆ ಮಾತನಾಡಲು ಆಸಕ್ತಿ ಇಲ್ಲ. ಸಾಹಿತ್ಯ ದೃಷ್ಟಿಯಲ್ಲಿ ಮೊದಲ ಬಾರಿಗೆ ಕನ್ನಡ ಭಾಷೆಗೆ ಬೂಕರ್ ಪ್ರಶಸ್ತಿ ಬಂದಿದೆಯೆಂದರು.

ಮೊದಲು ಹಿಂದಿಯ ಗೀತಾಂಜಲಿ ಶ್ರೀ ಅವರಿಗೆ ಬಂದಿತ್ತು, ಅದನ್ನು ಅನುವಾದ ಮಾಡಿದವರು ಅಮೇರಿಕಾದ ಡೇಸಿ ರಾಕ್ ಎನ್ನುವವರು. ಇದು ಎರಡನೇ ಸಲ ಇಂಡಿಯಾ ಸಾಹಿತ್ಯ ಕೃತಿಗೆ ಬೂಕರ್ ಪ್ರಶಸ್ತಿ ಬಂದಿದೆ. ನಮ್ಮಲ್ಲಿ ಕನ್ನಡ ಮಾತ್ರವಲ್ಲ ಭಾರತದ ಭಾಷೆಗಳ ಒಳ್ಳೆಯ ಕೃತಿಗಳು ಸಾಕಷ್ಟಿವೆ. ಅದರ ಮಧ್ಯೆ ಸುಮ್ಮನೆ ಬೇರೆ ಚರ್ಚೆಗೆ ಹೋಗದೆ ಸಾಹಿತ್ಯವನ್ನು ಮುಂದಿಟ್ಟುಕೊಂಡು ಅದರಲ್ಲಿ ಏನು ಮಾಡಬಹುದು ಎನ್ನುವುದು ನನಗೆ ಮುಖ್ಯ. ಇವತ್ತು ಮೊದಲ ಬಾರಿಗೆ ಅರಕಲಗೂಡು ದಸರಾಗೆ ಬಂದಿದ್ದೇನೆ. ಈ ಕಾರ್ಯಕ್ರಮ ಅತ್ಯಂತ ಖುಷಿ ತರಿಸಿದೆಯೆಂದು ಪ್ರತಿಕ್ರಿಯಿಸಿದರು.

# ಬೈಕ್ ಡಿಕ್ಕಿ: ಪಾದಚಾರಿ ಸಾವು

**ಹಾಸನ:** ಬೈಕ್ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ನಗರದ ಬಿ.ಎಂ. ರಸ್ತೆಯ ಕರೂರ್ ವೈಶ್ಯ ಬ್ಯಾಂಕ್ ಸಮೀಪ ಇತ್ತೀಚೆಗೆ ನಡೆದಿದೆ.

ಅರಕಲಗೂಡು ಪಟ್ಟಣದ ಕೆ.ಎಲ್.ಕೃಪೇಂದ್ರ ಗುಪ್ತ ಮೃತರು. ರೈಲ್ವೆ ನಿಲ್ದಾಣದ ಕಡೆಗೆ ಹೋಗುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಬೈಕ್ ಡಿಕ್ಕಿಯಾಗಿದೆ. ಗಂಭೀರ ಗಾಯ ಗೊಂಡಿದ್ದ ಬೈಕ್ ಸವಾರ ಹಾಗು ಕೃಪೇಂದ್ರ ಗುಪ್ತ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೆ ಹಿಮ್ಸ್‌ನಲ್ಲಿ ಮೃತಪಟ್ಟಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗಾಳಿ–ಮಳೆಗೆ ಧರೆಗುರುಳಿದ ಮರ, ವಿದ್ಯುತ್ ಕಂಬ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನಲ್ಲಿ ಕಳೆದ ಒಂದು ವಾರದಿಂದ ನಿರಂತರವಾಗಿ ಮಳೆ ಸುರಿಯುತ್ತಿರು ವುದರಿಂದ ಜನಜೀವನ ನಲುಗಿ ಹೋಗಿದೆ.

ಹೆತ್ತೂರು ಗ್ರಾಮದಲ್ಲಿ ನಿರಂತರವಾಗಿ ಬೀಳುತ್ತಿರುವ ಗಾಳಿಮಳೆಗೆ ಮರ ಬಿದ್ದು 5 ವಿದ್ಯುತ್ ಕಂಬಗಳು ಧರೆಗುರುಳಿದ ಪರಿಣಾಮ ಗುರುವಾರ ರಾತ್ರಿ ಹಾಡ್ಲಹಳ್ಳಿ–ಹೆತ್ತೂರು ಮುಖ್ಯ ರಸ್ತೆಯಲ್ಲಿ ಕೆಲ ಕಾಲ ಸಂಚಾರ ಬಂದ್ ಆಗಿತ್ತು. ರಾತ್ರಿ ವೇಳೆಯಲ್ಲೇ ಗ್ರಾಮಸ್ಥರು ಮರ ತೆರವುಗೊಳಿಸಿ ತಾತ್ಕಾಲಿಕವಾಗಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ವಿದ್ಯುತ್ ಕಂಬಗಳ ಜೊತೆ ಮರಗಳು ನೆಲಕ್ಕುರುಳಿ ಹೆತ್ತೂರು ಸೇರಿ ಹಲವು ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತ ಉಂಟಾಗಿತ್ತು. ರಕ್ಷಣಾ ಸಿಬ್ಬಂದಿ ರಾತ್ರಿಯಿಡಿ ಮರ ತೆರವು ಕಾರ್ಯ ನಡೆಸಿ ದರು. ವಿದ್ಯುತ್ ಸಂಪರ್ಕ ಕಡಿತವಾಗಿದ್ದರಿಂದ ಜನರು ಕತ್ತಲೆಯಲ್ಲಿ ಕಾಲ ಕಳೆಯುವಂತಾಯಿತು.

ಶುಕ್ರವಾರ ಬೆಳಿಗ್ಗೆ 8.30ಕ್ಕೆ ಕೊನೆಗೊಂಡಂತೆ ಹೆತ್ತೂರು ಹೋಬಳಿ ಭಾಗದಲ್ಲಿ ಅರ್ಧ ಇಂಚು ಮಳೆಯಾಗಿದೆ. ಉಳಿದಂತೆ ಯಸಳೂರು, ಹಾನುಬಾಳು ಹೋಬಳಿ ಭಾಗದಲ್ಲಿ ಸಾಧಾರಣ ಮಳೆಯಾಗಿದೆ. ತಾಲ್ಲೂಕಿನಾದ್ಯಂತ ಮೋಡಕವಿದ ವಾತಾವರಣವಿದ್ದು, ಆಗಾಗ್ಗೆ ಸುರಿಯುತ್ತಿರುವ ಮಳೆ ಜನರಿಗೆ ಕಿರಿಕಿರಿ ಉಂಟು ಮಾಡುತ್ತಿದೆ.



# ಬೇಕಾಬಿಟ್ಟಿ ಹಾಸನಾಂಬ ಉತ್ಸವ ಟೆಂಡರ್

## ಪಾರದರ್ಶಕತೆ ಕಾಯ್ದುಕೊಳ್ಳುವಲ್ಲಿ ಜಿಲ್ಲಾಡಳಿತ ವಿಫಲ: ದೇವರಾಜೇಗೌಡ ಆರೋಪ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಉತ್ಸವದ ಆಯೋಜನೆಯಲ್ಲಿ ಜಿಲ್ಲಾಡಳಿತದಿಂದ ಪಾರದರ್ಶಕತೆ ಕಾಯ್ದುಕೊಂಡು ಕೆಲಸ ಮಾಡುತ್ತಿಲ್ಲ. ಟೆಂಡರ್‌ಗಳನ್ನು ಬೇಕಾಬಿಟ್ಟಿಯಾಗಿ ನಡೆಸಲಾಗಿದೆ ಎಂದು ಬಿಜೆಪಿ ಮುಖಂಡರ ದೇವರಾಜೇಗೌಡ ಅವರು ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರಾ ಮಹೋತ್ಸವ ಹಿನ್ನಲೆ ನಗರ ದಲ್ಲಿ ಅಳವಡಿಸುವ ಸಿಸಿಟಿವಿ ಕ್ಯಾಮೆರಾ, ವಿದ್ಯುತ್ ಅಲಂಕಾರ ಸೇರಿ ಇತರೆ ಟೆಂಡರ್‌ಗಳನ್ನು ಬೇಕಾಬಿಟ್ಟಿಯಾಗಿ ನಡೆಸಲಾಗಿದೆ. ಜರ್ಮನ್ ಟೆಂಟ್ ಹಾಗು ಬ್ಯಾರಿಕೆಡ್ ಹಾಕಲು 60 ರಿಂದ 65 ಲಕ್ಷ ರೂ. ಸಾಕಾಗುತ್ತದೆ. ಆದರೆ, 86.99 ಲಕ್ಷಕ್ಕೆ ಟೆಂಡರ್ ನೀಡಲಾಗಿದೆ. ನಗರದಲ್ಲಿ ಸಿಸಿ ಟಿವಿ ಕ್ಯಾಮೆರಾ ಅಳವಡಿಕೆಗೆ ಖರೀದಿ ಮಾಡಿದರೂ 20 ಲಕ್ಷ ರೂ. ವೆಚ್ಚವಾಗುತ್ತದೆ. ಆದರೆ, 60 ಲಕ್ಷಕ್ಕೆ ಬಾಡಿಗೆ ಪಡೆದಿರುವುದು ಏಕೆ. ಅದರಿಂದ ಲಕ್ಷಾಂತರ ರೂ. ಸಾರ್ವಜನಿಕರ ಹಣ ಪೋಲಾಗುತ್ತಿದೆ ಎಂದು ದೂರಿದರು.



ನಿಯಮದಂತೆ ತಹಶೀಲ್ದಾರ್, ಉಪವಿಭಾಗಾಧಿಕಾರಿಯೇ ದೇವಸ್ಥಾನ ಆಡಳಿತ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಾರೆ. ಮೇಲುಸ್ತುವಾರಿಯಾಗಿ ಜಿಲ್ಲಾಧಿಕಾರಿ ಇರುತ್ತಾರೆ. ಆದರೆ, ಅವರ ಆಡಳಿತ ಸಂಪೂರ್ಣ ಹದಗೆಟ್ಟಿದೆ. ಹಾಸನಾಂಬ, ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ದಿಂದ ಕೋಟ್ಯಾಂತರ ರೂ. ಹಣ ಹರಿದುಬರುತ್ತಿದೆ. ಈ ಹಣ ಸದ್ಬಳಕೆ ಆಗಿದೆಯೇ ಎಂಬುದರ ಬಗ್ಗೆ ಮಾಹಿತಿ ಇಲ್ಲ. ಈ ಹಣದಿಂದ ದೇವಾಲಯ ಸುತ್ತಮುತ್ತಲಿನ ಕಟ್ಟಡಗಳ ಖರೀದಿ ಮಾಡಿ ದೇವಾಲಯದ ಆವರಣ ವಿಸ್ತರಿಸಬಹುದಾಗಿದೆ ಈ ಕುರಿತು ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಬಾರಿ ವಿಐಪಿ, ವಿವಿಐಪಿ ಪಾಸ್‌ಗಳನ್ನು ರದ್ದುಗೊಳಿಸಿ ಗೋಲ್ಡನ್ ಪಾಸ್ ವಿತರಿಸುವ ಕುರಿತು ನಿರ್ಧರಿಸಲಾಗಿದೆ. ಈ ಬಗ್ಗೆ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಈ ಪಾಸ್‌ಗಳನ್ನು ಯಾರಿಗೆ ನೀಡಲಾಗಿದೆ ಎಂಬುದನ್ನು ಸಾರ್ವಜನಿಕವಾಗಿ ಪ್ರದರ್ಶಿಸಬೇಕು. ನಮಗೆ ತಿಳಿದಿರುವ ಮಾಹಿತಿಯಂತೆ ಪ್ರತಿದಿನ ಒಂದು ಸಾವಿರ ಪಾಸಿನಂತೆ 18,000 ಪಾಸ್ ಮುದ್ರಿಸಲು ತೀರ್ಮಾ ನಿಸಲಾಗಿತ್ತು. ಆದರೆ, ಈಗಾಗಲೇ 40,000 ಪಾಸ್‌ಗಳನ್ನು ಮುದ್ರಿಸಲಾಗಿದೆ ಎಂಬುದು ಗೊತ್ತಾಗಿದೆ. ಕಳೆದ ಬಾರಿ ಶೇ.5ರಷ್ಟು ಪಾಸ್‌ಗಳು ಅಧಿಕೃತವಾಗಿ ಮುದ್ರಿತವಾದರೆ ಉಳಿದ ಶೇ.95 ರಷ್ಟು ಪಾಸ್‌ಗಳು ಅನಧಿಕೃತವಾಗಿ ಮುದ್ರಿತವಾಗಿದೆ. ಅದರಿಂದ ಸಾಕಷ್ಟು ಅವ್ಯವಹಾರ ನಡೆದಿದೆ. ಈ ಬಗ್ಗೆ ದೇವಸ್ಥಾನ ಆಡಳಿತಾಧಿಕಾರಿಯೇ ಒಪ್ಪಿಕೊಂಡಿದ್ದಾರೆ ಎಂದು ದೂರಿದರು.

**ಹೈಕಮಾಂಡ್ ಒಪ್ಪಿದರೆ ಹಾಸನದಿಂದ ಸ್ಪರ್ಧೆ**

ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಹೈಕಮಾಂಡ್ ಒಪ್ಪಿದೆ ಹಾಸನ ಕ್ಷೇತ್ರದಿಂದ ಸ್ಪರ್ಧಿ ಸುವುದಾಗಿ ದೇವರಾಜೇಗೌಡ ಅವರು ಹೇಳಿದರು. ಈ ಹಿಂದೆ ಬಿಜೆಪಿಯಿಂದ ಸ್ಪರ್ಧೆಮಾಡಿದ್ದ ಅಭ್ಯರ್ಥಿ ಭೂ ಮಾಫಿಯಾ ಜೊತೆಗೆ ಸೇರಿ ಪಕ್ಷದ ಗೌರವಕ್ಕೆ ಧಕ್ಕೆ ತರುತ್ತಿದ್ದಾರೆ. ಕಾಂಗ್ರೆಸ್ ಸಂದಸರೊಂದಿಗೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಗಣಪತಿ ಉತ್ಸವ ಸೇರಿ ನಾನಾ ಕಾರ್ಯಕ್ರಮಗಳಲ್ಲಿ ಒಟ್ಟಿಗೆ ಕಾಣಿಸಿಕೊಳ್ಳುತ್ತಿದ್ದಾರೆ. ಅದನ್ನು ಮನಗಂಡು ಹೈಕಮಾಂಡ್ ಯಾವ ತೀರ್ಮಾನ ಕೈಗೊಳ್ಳಲಿದೆ ಅದಕ್ಕೆ ನಾನು ಬದ್ಧನಾಗಿರುತ್ತೇನೆ. ಹೊಳೆನರಸೀಪುರ ಅಥವಾ ಹಾಸನದಿಂದ ಸ್ಪರ್ಧೆ ಮಾಡಲು ಸಿದ್ಧನಿದೇನೆಂದು ಹೇಳಿದರು. ಗುತ್ತಿಗೆದಾರ ಶಿವರಾಮ್, ನಾಗರಾಜ ಇದ್ದರು.


# ಹಾರ್ಡ್‌ವೇರ್ ಅಂಗಡಿಗೆ ಬೆಂಕಿ: ಲಕ್ಷಾಂತರ ರೂ. ನಷ್ಟ

• ಪ್ರಜೋದಯ ವರದಿ


**ಬೇಲೂರು:** ತಾಲ್ಲೂಕಿನ ಬಿಕ್ಕೋಡು ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ರಂಗಸ್ವಾಮಿ ಅವರ ಮಾಲೀಕತ್ವದ ಬಾಲಾಜಿ ಹಾರ್ಡ್‌ವೇರ್ ಅಂಗಡಿಗೆ ಆಕಸ್ಮಿಕ ಬೆಂಕಿ ತಗುಲಿ ಲಕ್ಷಾಂತರ ರೂ. ಮೌಲ್ಯದ ಎಲೆಕ್ಟ್ರಿಕಲ್, ಹಾರ್ಡ್‌ವೇರ್ ಹಾಗು ಇತರೆ ಕೃಷಿ ಸಂಬಂಧಿತ ಪರಿಕರಗಳು ಸುಟ್ಟು ಕರಕಲಾಗಿರುವ ಘಟನೆ ಗುರುವಾರ ರಾತ್ರಿ ನಡೆದಿದೆ.

ವಿಜಯದಶಮಿ ಹಬ್ಬದ ಪ್ರಯುಕ್ತ ಮಾಲೀಕರಾದ ರಂಗಸ್ವಾಮಿ ಅವರು ಅಂಗಡಿಯನ್ನು ಮುಚ್ಚಿ ಮನೆಗೆ ತೆರಳಿದ್ದರು. ರಾತ್ರಿ ಸಮಯದಲ್ಲಿ ಅಂಗಡಿಯ ಒಳಗಿನಿಂದ ದಟ್ಟ ಹೊಗೆ ಕಾಣಿಸಿಕೊಂಡಿದನ್ನು ಗಮನಿಸಿದ ನೆರೆಹೊರೆಯವರು ಮಾಲೀಕರಿಗೆ ತಿಳಿಸಿದ್ದರಿಂದ ಅಂಗಡಿ ಮಾಲೀಕರು ತಕ್ಷಣವೇ ಅಗ್ನಿಶಾಮಕ ದಳದವರಿಗೆ ಮಾಹಿತಿ ನೀಡಿದ್ದಾರೆ.

ಸ್ಥಳೀಯರು ಹಾರ್ಡ್‌ವೇರ್ ಅಂಗಡಿಯ ಬಾಗಿಲು ಒಡೆದು ಬೆಂಕಿ ನಂದಿಸಲು ಮುಂದಾದಾಗಲೇ ಅಗ್ನಿಶಾಮಕ ದಳದ ವಾಹನ ಸ್ಥಳಕ್ಕೆ ಬಂದು ಸಂಪೂರ್ಣ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾಯಿತು. ಸಕಾಲದಲ್ಲಿ ಬೆಂಕಿ ನಂದಿಸಿರುವುದರಿಂದ ಅಕ್ಕಪಕ್ಕದಲ್ಲಿದ್ದ ಬಟ್ಟೆ ಹಾಗು ಹಾರ್ಡ್‌ವೇರ್ ಅಂಗಡಿಗಳು ಸುರಕ್ಷಿತವಾಗಿದ್ದು, ಹೆಚ್ಚಿನ ಅಪಾಯ ತಪ್ಪಿದಂತಾಗಿದೆ. ಬೆಂಕಿ ಅವಘಡದಿಂದ ಅಂಗಡಿಯಲ್ಲಿದ್ದ ಲಕ್ಷಾಂತರ ರೂ. ಮೌಲ್ಯದ ಎಲೆಕ್ಟ್ರಿಕಲ್, ಹಾರ್ಡ್‌ವೇರ್ ಮತ್ತು ಕೃಷಿ ಪರಿಕರಗಳು ಸುಟ್ಟು ಕರಕಲಾಗಿದ್ದು, ಅಪಾರ ಪ್ರಮಾಣ ನಷ್ಟವುಂಟಾಗಿದೆ.



# ಚೌಡೇಶ್ವರಿ ದೇಗುಲದಲ್ಲಿ ನವರಾತ್ರಿ ಉತ್ಸವ ಸಂಪನ್ನ



• ಪ್ರಜೋದಯ ವರದಿ

**ಅರೇಹಳ್ಳಿ:** ಬೇಲೂರು ತಾಲ್ಲೂಕು ಅರೇಹಳ್ಳಿ ಹೋಬಳಿ ವಾಟೇಹಳ್ಳಿ–ಹೊಸಮನೆ ಗ್ರಾಮದಲ್ಲಿರುವ ಚೌಡೇಶ್ವರಿ ದೇಗುಲದಲ್ಲಿ ನವರಾತ್ರಿ ಉತ್ಸವ ಸಂಪನ್ನಗೊಂಡಿತು.

ದೇವಸ್ಥಾನ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಮಂಜುನಾಥ್ ಶೆಟ್ಟಿ ಅವರು ಮಾತನಾಡಿ, ಟ್ರಸ್ಟ್ ಹಾಗು ಉತ್ಸವ ಸಮಿತಿಯಿಂದ ಆಯೋಜಿಸಿದ್ದ ನವರಾತ್ರಿ ಪೂಜೆ ಅರ್ಥಪೂರ್ಣವಾಗಿ ನೆರ ವೇರಿದೆ. ದೇವಿಗೆ ಹೂವು ಹಾಗು ಚಿನ್ನಾಭರಣ ಅಲಂಕಾರ, ಪಂಚಾಮೃತ ಅಭಿಷೇಕ ನೆರವೇರಿಸಲಾಗಿದೆ. ಹನ್ನೊಂದನೇ ದಿನ ಗಣಪತಿ ಹೋಮ, ಗಂಗಾ ಹೋಮ, ಗಣ ಹೋಮ, ಕಲಾಭಿ ವೃದ್ಧಿ ಹೋಮವನ್ನು ಭಕ್ತಿಯಿಂದ ನಡೆಸಲಾಯಿತು. ಭಕ್ತರು ಇಷ್ಟಾರ್ಥ ಸಿದ್ಧಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದ್ದಾರೆಂದರು.

ಉತ್ಸವ ಸಮಿತಿ ಅಧ್ಯಕ್ಷ ಆನಂದ ಶೆಟ್ಟಿ, ಟ್ರಸ್ಟ್ ಖಜಾಂಚಿ ಲಕ್ಷ್ಮಣ್ ರಾಜ್ ಅರಸ್, ಉತ್ಸವ ಸಮಿತಿ ಮಾಜಿ ಅಧ್ಯಕ್ಷ ಅಶೋಕ್ ರಾಜ್ ಅರಸ್, ದೇವರಾಜ್ ಅರಸ್, ರಜನೀಶ್ ಅರಸ್, ಧನರಾಜ್ ಅರಸ್, ಸುರೇಶ್ ರಾಜ್ ಅರಸ್, ಮಹೇಶ್ ಶೆಟ್ಟಿ, ಶಾಂತರಾಜ್ ಶೆಟ್ಟಿ ಇತರರಿದ್ದರು.

# ಗಣತಿದಾರರಿಂದ ಲಿಂಗಾಯತರ ದಾರಿ ತಪ್ಪಿಸುವ ಕೆಲಸ

## ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಹೊಂಬೇಶ್ ಆರೋಪ

• ಪ್ರಜೋದಯ ವರದಿ

**ಹಾಸನ:** ಜಾತಿಗಣತಿ ವೇಳೆ ಧರ್ಮದ ಕಾಲಂನಲ್ಲಿ ಲಿಂಗಾಯತ ಧರ್ಮ ಎಂಬುದಿಲ್ಲ, ಹಿಂದೂ ಎಂದೇ ಬರೆಸುವಂತೆ ಅಧಿಕಾರಿಗಳು ಸಮುದಾಯದ ಜನರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಹೊಂಬೇಶ್ ಅವರು ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮೀಕ್ಷೆಯ 11ನೇ ಕಾಲಂನಲ್ಲಿ ಇತರೆ ಎಂದು ಬರೆಸಲು ಅವಕಾಶವಿದೆ. ಅಲ್ಲಿ ಲಿಂಗಾಯತ ಸಮುದಾಯದವರು ಲಿಂಗಾಯತ ಧರ್ಮ ಎಂದೇ ಬರೆಸಬೇಕು. ಈ ಬಗ್ಗೆ ಅಧಿಕಾರಿಗಳು ಜನರಿಗೆ ಸ್ಪಷ್ಟ ಮಾಹಿತಿ ನೀಡುತ್ತಿಲ್ಲ. ತಪ್ಪು ಮಾಹಿತಿ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಲಿಂಗಾಯತರ ಆಚರಣೆ, ವಿಚಾರಗಳು ವಿಭಿನ್ನವಾಗಿವೆ. 12ನೇ ಶತಮಾನದಲ್ಲಿ ಬಸವಣ್ಣ ನವರ ತತ್ವಗಳಿಂದ ಆಕರ್ಷಿತರಾಗಿ ನೂರಾರು ವಿವಿಧ ಜಾತಿ, ಪಂಗಡ ಮತ್ತು ಧರ್ಮಗಳ ಜನರು ಲಿಂಗಾಯತ ಧರ್ಮವನ್ನು ಸೇರಿದರು. ಅವರೆಲ್ಲ ಬಸಣ್ಣನವರ ತತ್ವ, ಆದರ್ಶಗಳನ್ನು ಆಚರಿಸುತ್ತಿದ್ದಾರೆ. ಮಾನವೀಯ ಸಿದ್ಧಾಂತ, ನಂಬಿಕೆ, ಆಚರಣೆ ಮತ್ತು ಸಂಪ್ರದಾಯದ ಹೊಂದಿರುವ ಈ ಧರ್ಮಕ್ಕೆ ಜಾಗತಿಕ ಮಟ್ಟದ ಮನ್ನಣೆ ಸಿಗಬೇಕೆಂದು ಹೇಳಿದರು.




ಜಾಗತಿಕ ಲಿಂಗಾಯತ ಮಹಾಸಭಾ ಕಾರ್ಯದರ್ಶಿ ಭುವನಾಕ್ಷ ಅವರು ಮಾತನಾಡಿ, ಲಿಂಗಾಯತ ಧರ್ಮವನ್ನು ಬೌದ್ಧ, ಜೈನ, ಸಿಖ್ ಧರ್ಮಗಳಂತೆ ಸಮಾನಾಂತರವಾಗಿ ಪರಿಗಣಿಸ ಲಾಗಿದೆ. ಲಿಂಗಾಯತ ಧರ್ಮವು ಪ್ರತ್ಯೇಕ ಅಲ್ಪಸಂಖ್ಯಾತ ಧರ್ಮವಾದರೆ ಈಗಾಗಲೇ ಮಾನ್ಯತೆ ಪಡೆದಿರುವ ಅಲ್ಪಸಂಖ್ಯಾತ ಧರ್ಮಗಳಿಗೆ ದೊರೆಯುತ್ತಿರುವ ಯಾವುದೇ ಮೀಸ ಲಾತಿ ಹಾಗು ಸವಲತ್ತುಗಳು ಕಡಿಮೆಯಾಗುವುದಿಲ್ಲ. ಅದೇ ರೀತಿ ಹಿಂದೂ ಧರ್ಮಕ್ಕೆ ಯಾವುದೇ ರೀತಿಯ ವೈರುಧ್ಯ ಉಂಟಾಗುವುದಿಲ್ಲ. ರಾಷ್ಟ್ರದ ಐಕ್ಯತೆ, ಸೌಹಾರ್ದತೆ ಮತ್ತು ರಾಷ್ಟ್ರಭಕ್ತಿಗೆ ತೊಂದರೆಯಾಗುವುದಿಲ್ಲ ಎಂದು ತಿಳಿಸಿದರು.

ಲಿಂಗಾಯತ ಸ್ವತಂತ್ರ ಧರ್ಮವಾದರೆ ಸಮುದಾಯದ ಮಕ್ಕಳಿಗೆ ಶಿಕ್ಷಣ ಸೌಲಭ್ಯ, ಉದ್ಯೋಗ ಪಡೆಯಲು ಮೀಸಲಾತಿ ದೊರೆಯುತ್ತದೆ. ಸಮುದಾಯದ ಬಡವರಿಗೆ ಸರ್ಕಾರದಿಂದ ಸಾಲ ಸೌಲಭ್ಯ, ಸ್ವ–ಉದ್ಯೋಗ ಆರಂಭಿಸಲು ನೆರವು ಸಿಗುತ್ತದೆ ಎಂದರು. ಈ ಸಂದರ್ಭದಲ್ಲಿ ಲತೇಶ್ ಇದ್ದರು.

# ಶಕ್ತಿ ದೇವತೆ ಹಾಸನಾಂಬ ಜಾತ್ರೆಗೆ ಭರದ ಸಿದ್ಧತೆ

» ಮೊದಲನೇ ಪುಟದಿಂದ

ವಿಐಪಿ, ವಿವಿಐಪಿ ಪಾಸ್‌ಗಳನ್ನು ರದ್ದು ಮಾಡಿದ್ದು ಗೋಲ್ಡ್ ಪಾಸ್ ಜಾರಿಗೆ ತರಲಾಗಿದೆ. ಒಂದು ಪಾಸ್‌ಗೆ ಒಬ್ಬರಿಗೆ ಮಾತ್ರ ಅವಕಾಶ ವಿದ್ದು ದಿನದಲ್ಲಿ ಎರಡು ಗಂಟೆ ಮಾತ್ರ ದೇವಿ ದರ್ಶನಕ್ಕೆ ಅವಕಾಶ ನೀಡಲಾ ಗಿದೆ. ದರ್ಶನಕ್ಕೆ ಬರುವಂತಹ ವೃದ್ಧರು ಮತ್ತು ಅಂಗವಿಕಲರನ್ನು ದೇವಿ ದರ್ಶನಕ್ಕೆ ಕರೆದುಕೊಂಡು ಹೋಗಲು ವ್ಯವಸ್ಥೆ ಕಲ್ಪಿಸಲಾಗಿದೆ. ಸುಗಮ ದರ್ಶನಕ್ಕಾಗಿ ಜನದಟ್ಟಣೆ ಉಂಟಾಗುವುದನ್ನು ತಪ್ಪಿಸಲು ದೇವಾಲಯದಿಂದ 30 ಕಿ.ಮೀ. ಬ್ಯಾರಿಕೇಡ್ ವ್ಯವಸ್ಥೆ, ಜರ್ಮನ್ ಟೆಂಟ್, ನೆಲಕ್ಕೆ ಮ್ಯಾಟ್, 100ಕ್ಕೂ ಹೆಚ್ಚು ತಾತ್ಕಾಲಿಕ ಶೌಚಾಲಯಗಳ ಅಳವಡಿಕೆ ಕಾರ್ಯ ನಡೆಯುತ್ತಿದೆ.

ಸರದಿ ಸಾಲಿನಲ್ಲಿ ಬರುವ ಭಕ್ತರಿಗೆ ತೊಂದರೆಯಾಗದಂತೆ ಫ್ಯಾನ್, ಗರ್ಭಗುಡಿ ಮುಂಭಾಗ ಎಸಿ, ಭಕ್ತರಿಗೆ ಕುಡಿಯಲು ನೀರು ಮತ್ತು ಮಜ್ಜಿಗೆ ನೀಡಲು ವ್ಯವಸ್ಥೆ ಮಾಡಿಕೊಳ್ಳಲಾಗು ತ್ತಿದೆ. ದೇವಾಲಯದ ಒಳಗೆ ಮತ್ತು ಹೊರಗೆ ಆಕರ್ಷಣೆಯವಾಗಿ ಮತ್ತು ವಿಭಿನ್ನವಾಗಿ ಹೂವಿನ ಅಲಂಕಾರ ಮಾಡಲು ಕ್ರಮ ವಹಿಸಲಾಗಿದೆ.

## ಅ.06 ರಂದು ಸಾಮಾನ್ಯ ಸಭೆ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆಯ ಮಹಾ ಪೌರರಾದ ಗಿರೀಶ್‌ಚನ್ನವೀರಪ್ಪ ಅವರ ಅಧ್ಯಕ್ಷತೆಯಲ್ಲಿ ಅ.06ರ ಮಧ್ಯಾಹ್ನ 12.30ಕ್ಕೆ ಮಹಾನಗರ ಪಾಲಿಕೆಯ ರಾಷ್ಟ್ರಕವಿ ಕುವೆಂಪು ಸಭಾಂಗಣದಲ್ಲಿ ಸಾಮಾನ್ಯ ಸಭೆ ಕರೆಯಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

# ಜನರ ಆದೇಶ ಕದಿಯುವ ವ್ಯವಸ್ಥಿತ ಪಿತೂರಿ

• ಪ್ರಜೋದಯ ವರದಿ

**ಬೆಂಗಳೂರು:** ಬಿಜೆಪಿಯು ವೋಟ್ ಚೋರಿ (ಮತ ಕಳ್ಳತನ) ಮೂಲಕ ಜನರ ಆದೇಶವನ್ನು ಕದಿಯಲು ಯೋಜಿತ ಪಿತೂರಿ ನಡೆಸುತ್ತಿದೆ. ಇದು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲಿನ ದಾಳಿಯೆಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಆರೋಪಿಸಿದ್ದಾರೆ.

ಪುಲಕೇಶಿ ನಗರದಲ್ಲಿ ನಡೆದ ಮತ ಕಳ್ಳತನದ ವಿರುದ್ಧ ಸಹಿ ಅಭಿಯಾನ ಉದ್ಘಾಟಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೋಟ್ ಚೋರಿ ಕೇವಲ ಮಹದೇವಪುರ ಅಥವಾ ಆಳಂದ, ಮಹಾರಾಷ್ಟ್ರದ ವಿಧಾನಸಭಾ ಕ್ಷೇತ್ರಕ್ಕೆ ಮಾತ್ರ ಸೀಮಿತವಾಗಿಲ್ಲ. ಜನರ ಆದೇಶವನ್ನು ಕದಿಯುವ ವೋಟ್ ಚೋರಿ ಭಾರತದ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲಿನ ಉದ್ದೇಶಪೂರ್ವಕ ದಾಳಿಯಾಗಿದೆ. ಬಿಜೆಪಿಯ ದುಷ್ಟ ಶಕ್ತಿಗಳು ನಿಮ್ಮ ಆಯ್ಕೆಯ ವ್ಯಕ್ತಿಯನ್ನು ಆಯ್ಕೆ ಮಾಡುವ ನಿಮ್ಮ ಹಕ್ಕನ್ನು ಕಸಿದುಕೊಳ್ಳುತ್ತಿವೆಯೆಂದು ತಿಳಿಸಿದರು.

ಅಂಬೇಡ್ಕರ್, ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು, ಸರ್ದಾರ್ ವಲ್ಲಭ ಭಾಯಿ ಪಟೇಲ್, ಅಬ್ದುಲ್ ಕಲಾಂ, ಡಾ. ರಾಜೇಂದ್ರ ಪ್ರಸಾದ್ ಮತ್ತು ಇತರ ಹಲವಾರು ಸ್ವಾತಂತ್ರ್ಯ ಹೋರಾಟಗಾರರು ಸಂವಿಧಾನದಲ್ಲಿ ಪ್ರತಿಪಾದಿಸಿರುವ ಒಬ್ಬ ವ್ಯಕ್ತಿ, ಒಂದು ಮತ ತತ್ವವನ್ನು ಕಸಿದು ಕೊಳ್ಳುವುದು ಈ ಯೋಜಿತ ಪಿತೂರಿ ಹಿಂದಿದೆ ಎಂದರು.



ಮತ ಕಳ್ಳತನದಲ್ಲಿ ತೊಡಗಿರುವ ಬಿಜೆಪಿ ಶಕ್ತಿಗಳು ಮತ್ತು ಬಂಧಿಯಾಗಿರುವ ಭಾರತೀಯ ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಪಕ್ಷವು ವೋಟ್ ಚೋರಿ ಕುರಿತು ರಾಷ್ಟ್ರವ್ಯಾಪಿ ಸಹಿ ಅಭಿಯಾನವನ್ನು ಪ್ರಾರಂಭಿಸಿದೆ. ಚುನಾವಣಾ ಆಯೋಗವು ಮೂಕ ಪ್ರೇಕ್ಷಕ ಮತ್ತು ಭಾಗಿದಾರನಾಗಿದೆಯೆಂದು ಆರೋಪಿಸಿದರು.

ಮುಂದಿನ ದಿನಗಳಲ್ಲಿ ರಾಹುಲ್ ಗಾಂಧಿ ಅವರು ದತ್ತಾಂಶವನ್ನು ಬಹಿರಂಗಪಡಿಸುತ್ತಿದ್ದಂತೆ, ಸಂವಿಧಾನದ ಮೇಲೆ, ಮತದಾನದ ಹಕ್ಕಿನ ಮೇಲೆ, ಪ್ರಜಾಪ್ರಭುತ್ವದ ಮೇಲೆ ಮತ್ತು ಭಾರತದ ಆತ್ಮದ ಮೇಲೆ ನಡೆದ ದಾಳಿಯ ವ್ಯಾಪ್ತಿಯನ್ನು ಇಡೀ ರಾಷ್ಟ್ರವು ಅರ್ಥಮಾಡಿಕೊಳ್ಳುತ್ತದೆಂದರು. ಇತ್ತೀಚಿನ ಅಧಿಕಾರ ಹಂಚಿಕೆ ಹೇಳಿಕೆಗಳ ನಂತರ ಕಾಂಗ್ರೆಸ್ ಕೆಲವು ನಾಯಕರಿಗೆ ನೋಟೀಸ್ ನೀಡಿರುವುದರ ಕುರಿತು, ಪಕ್ಷದಲ್ಲಿನ ಯಾವುದೇ ಭಿನ್ನಾಭಿಪ್ರಾಯದ ಬಗ್ಗೆ ವರದಿಗಳನ್ನು ಅವರು ತಳ್ಳಿಹಾಕಿದರು.

**ನಿಭಾಯಿಸಲು ಹೇಳಿರುವೆ**

ನಮ್ಮ ಪ್ರದೇಶ ಕಾಂಗ್ರೆಸ್ ಸಮಿತಿ (ಪಿಸಿಸಿ) ಅಧ್ಯಕ್ಷರು ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಕ್ಷದ ಎಲ್ಲಾ ಸದಸ್ಯರು ಪಕ್ಷದ ಅಧಿಕೃತ ನಿಲುವನ್ನು ಅನುಸರಿಸುವಂತೆ ಮತ್ತು ಗಡಿ ಮೀರಿ ಮಾತನಾಡದಂತೆ ನೋಡಿಕೊಳ್ಳುವ ಸಂಪೂರ್ಣ ಅಧಿಕಾರ ಹೊಂದಿದ್ದಾರೆ. ಅಂತಹ ವರನ್ನು ನಿಭಾಯಿಸಲು ನಾನು ಶಿವಕುಮಾರ್ ಅವರಿಗೆ ಸೂಚಿಸಿದ್ದೇನೆಂದರು.

ರಾಜ್ಯದ ಜನರಿಗೆ ಆಡಳಿತದಲ್ಲಿ ಪೂರ್ಣ ಭಾಗವಹಿಸುವಿಕೆ ಮತ್ತು ಐದು ಭರವಸೆಗಳ ಯಶಸ್ಸನ್ನು ಖಚಿತಪಡಿಸಿಕೊಳ್ಳುವುದು ನಮ್ಮ ಪಕ್ಷದ ಆದ್ಯತೆಯಾಗಿದೆ ಎಂದು ಅವರು ಒತ್ತಿ ಹೇಳಿದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172–231188, ಮೊ: 9449203019